# ಡಾ. ಅಗರವಾಲ್ ಆಸ್ಪತ್ರೆಯಲ್ಲಿ ರಕ್ಷಾ ಬಂಧನ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಶಾಂತಿನಗರ ವಿಧಾನಸಭಾ ಕ್ಷೇತ್ರ ಲ್ಯಾಂಗ್ ಫೋರ್ಡ್ ರಸ್ತೆಯಲ್ಲಿರುವ ಡಾ.ಅಗರವಾಲ್ ಆಸ್ಪತ್ರೆಯಲ್ಲಿ ರಕ್ಷಾ ಬಂಧನ ಹಬ್ಬವನ್ನು ನೇತ್ರಾ ವೈದ್ಯರಾದ ಡಾ.ಸುನೀತ್ ಅಗರ್ ವಾಲ್ ರವರು ವೈದ್ಯರು, ಸಿಂಬ್ಬದಿಗಳ ಮತ್ತು ಮಕ್ಕಳ ಜೊತೆಯಲ್ಲಿ ಆಚರಿಸಿದರು. ಡಾ.ಸುನೀತಾ ಅಗರವಾಲ್‌ರವರು ಮಾತನಾಡಿ ಸಹೋದರ– ಸಹೋದರಿಯರ ಪ್ರೀತಿ, ರಕ್ಷಣೆಯ ಬಂಧನದ ಹಬ್ಬ ಇದು ರಾಖಿ ಕಟ್ಟುವುದು ಅಂದ್ರೆ, ಕೇವಲ ದಾರವಲ್ಲ, ಅದು ನಾನು ನಿನ್ನ ಜೊತೆ ಇದ್ದೇನೆ ಅನ್ನೋ ಭರವಸೆ ಸಹೋದರಿ ಸಹೋದರನಿಗೆ ದೀರ್ಘಾಯುಷ್ಯ, ಯಶಸ್ಸು ಬಯಸಿ ರಾಖಿ ಕಟ್ಟಿದರೆ, ಸಹೋದರ ಅವಳನ್ನು ಜೀವನಪೂರ್ತಿ ಕಾಪಾಡುವ ಮಾತು ಕೊಡ್ತಾನೆ ಎಂದರ್ಥ. ನೇತ್ರದಾನ, ಮಹಾದಾನ ಎಲ್ಲರು ನೇತ್ರದಾನ ಮಾಡಿ, ಮನುಷ್ಯ ಸತ್ತ ಮೇಲೆ ಅವನ ಅಂಗಾಂಗ ಇನ್ನೊಬ್ಬರ ಬಾಳಿಗೆ ಬೆಳಕಾಗುತ್ತದೆ. ಎಲ್ಲರು ಸಹಬಾಳ್ವೆಯಲ್ಲಿ ಸಹೋದರ, ಸಹೋದರಿಯರಂತೆ ಬಾಳಬೇಕು. ನಾವೆಲ್ಲರು ಒಂದೇ ಎಂದು ಜೀವನ ಸಾಗಿಸಬೇಕು ಆಗ ದೇಶ ಅಭಿವೃದ್ಧಿಯಾಗುತ್ತದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

# ಬೆಂಗಳೂರಿನಲ್ಲಿ ಪ್ರತ್ಯೇಕ ಪೊಲೀಸ್ ಸ್ಕ್ವಾಡ್

• ಉದಯವಾಹಿನಿ, ಬೆಂಗಳೂರು

ರಾಜಧಾನಿಯಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಬೆಂಗಳೂರಿನಲ್ಲಿ ಪ್ರತ್ಯೇಕ ಪೊಲೀಸ್ ಸ್ಕ್ವಾಡ್‌ಗಳನ್ನು ನಿಯೋಜಿಸಲು ಸರ್ಕಾರ ನಿರ್ಧರಿಸಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ರಾಜಧಾನಿ ಬೆಂಗಳೂರಿನ ಫೀಲ್ಡ್ ಮಾರ್ಷಲ್ ಮಾಣೆಕ್ ಷಾ ಪೆರೇಡ್ ಮೈದಾನದಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯ ವತಿಯಿಂದ ಆಯೋಜಿಸಲಾದ ಸಮಗ್ರ ಸಾಮರ್ಥ್ಯ ವೃದ್ಧಿ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಮಾತನಾಡಿದ ಅವರು, ರಾಜಾರೋಷವಾಗಿ ನಡೆಯುತ್ತಿರುವ ರೌಡಿಸಂ ಅನ್ನು ನಿಗ್ರಹಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ಪೊಲೀಸರು ಯಾವುದೇ



ಉದಯವಾಹಿನಿ ಚಿತ್ರ

ಚಿಂತೆ ಮಾಡದೆ ಧೈರ್ಯದಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು. ನೀವೇ ಧರ್ಮ ಕಾಯುವವರು, ನಿಷ್ಠೆಯಿಂದ ಕೆಲಸ ಮಾಡುವವರು. ನಾಡಿನ ರಕ್ಷಣೆಗಾಗಿ ನಿಮ್ಮನ್ನು ಇಲ್ಲಿ ಕರೆದುಕೊಂಡು ಬಂದಿದ್ದೇವೆ. ನಿಮ್ಮೆಲ್ಲರಿಗೂ ಅಭಿನಂದನೆ ಸಲ್ಲಿಸುತ್ತೇನೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು. ಪೊಲೀಸ್ ಸಿಬ್ಬಂದಿಯ ಸಾಮರ್ಥ್ಯ, ಕೌಶಲ್ಯ ಹಾಗೂ ಕಾರ್ಯಕ್ಷಮತೆಯನ್ನು ಹೆಚ್ಚಿಸುವುದು ತರಬೇತಿಯ ಪ್ರಮುಖ ಉದ್ದೇಶವಾಗಿದೆ. ಭದ್ರತಾ ಸವಾಲುಗಳನ್ನು ಸಮರ್ಥವಾಗಿ ಎದುರಿಸಲು ಹಾಗೂ ಬೆಂಗಳೂರಿನ ಜನರ ಸುರಕ್ಷತೆಯನ್ನು ಮತ್ತಷ್ಟು ಬಲಪಡಿಸಲು ವಿಶೇಷ ತರಬೇತಿ ನೀಡಲಾಗುತ್ತಿದೆ.ನಮ್ಮ ರಕ್ಷಣೆಗಾಗಿ ನೀವು ತರಬೇತಿ ಪಡೆದಿದ್ದೀರಿ. ಹಗಲಿರುಳು ಕಠಿಣ ತರಬೇತಿ ಪಡೆದು ಕರ್ತವ್ಯಕ್ಕೆ ಸಜ್ಜಾಗಿದ್ದೀರಿ. ನಿಮ್ಮ ಕೌಶಲ್ಯವನ್ನು ಹೆಚ್ಚಿಸಲು ಈ ವಿಶೇಷ ತರಬೇತಿ ನೀಡಲಾಗಿದೆ .ನೀವೇ ಕಾನೂನು ಪಾಲಕರು, ನೀವೇ ಕಾನೂನಿನ ರಕ್ಷಕರು. ಸಮಾಜದಲ್ಲಿ ಶಾಂತಿ ಕಾಪಾಡುವಲ್ಲಿ ತರಬೇತಿ ಸಾರ್ಥಕವಾಗಬೇಕು. ಅಶಾಂತಿ ಹಾಗೂ ಭಯೋತ್ಪಾದನೆ ತಡೆಗಟ್ಟಲು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು ಎಂದು ಪೊಲೀಸರಿಗೆ ಕರೆ ನೀಡಿದರು.

## ಪ್ರತಿ ಜಿಲ್ಲೆಯಲ್ಲೂ 50,000 ನಿವೇಶನ ಡಿಸೆಂಬರ್ ಒಳಗೆ 5 ಲಕ್ಷ ಪ್ಲಾಟ್‌ಗಳ ವಿತರಣೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ರಾಜ್ಯದ ವಸತಿ ರಹಿತರಿಗೆ ಹಾಗೂ ಬಡ ಕುಟುಂಬಗಳಿಗೆ ಕರ್ನಾಟಕ ಸರ್ಕಾರ ಭರ್ಜರಿ ಕೊಡುಗೆಯೊಂದನ್ನು ಘೋಷಿಸಿದೆ. ಪ್ರತಿ ಜಿಲ್ಲೆಯಲ್ಲೂ ಕನಿಷ್ಠ 50,000 ವಸತಿ ನಿವೇಶನಗಳನ್ನು ಅಭಿವೃದ್ಧಿಪಡಿಸಿ, ಮುಂಬರುವ ಡಿಸೆಂಬರ್ 31ರ ಒಳಗಾಗಿ ಒಟ್ಟು 5 ಲಕ್ಷ ನಿವೇಶನಗಳನ್ನು ಹಂಚಿಕೆ ಮಾಡಲು ಕಂದಾಯ ಇಲಾಖೆ ಸಜ್ಜಾಗಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ. ಕಂದಾಯ ಇಲಾಖೆ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಸೆಪ್ಟೆಂಬರ್ 15ರೊಳಗೆ ಸೂಕ್ತ ಸರ್ಕಾರಿ ಜಮೀನುಗಳನ್ನು ಗುರುತಿಸುವಂತೆ ಸೂಚಿಸಿದರು. ಗುರುತಿಸುವ ಜಮೀನಿಗೆ ರಸ್ತೆ ಹಾಗೂ ನೀರಿನ ಸೌಲಭ್ಯ ಇರಬೇಕು. ಗ್ರಾಮಗಳಿಗೆ ಸಮೀಪದಲ್ಲಿರುವ ಜಮೀನಿಗೆ ಆದ್ಯತೆ ನೀಡಬೇಕು ಎಂದು ಹೇಳಿದರು. ನಿವೇಶನ ಹಂಚಿಕೆಯಲ್ಲಿ ದುರ್ಬಲ ವರ್ಗಗಳಿಗೆ ಆದ್ಯತೆ ನೀಡಬೇಕು. ಪರಿಶಿಷ್ಟ ಜಾತಿ, ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರು, ಅಂಗವಿಕಲರು, ವಿಧವೆಯರು ಹಾಗೂ ಲೈಂಗಿಕ ಅಲ್ಪಸಂಖ್ಯಾತರಿಗೆ ಆದ್ಯತೆ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಇದೇ ವೇಳೆ ಕಂದಾಯ ಗ್ರಾಮಗಳ ಘೋಷಣೆಯಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಪರಮೇಶ್ವರ್ ಅವರು ಅಸಮಾಧಾನ ವ್ಯಕ್ತಪಡಿಸಿದರು. ರಾಜ್ಯದಲ್ಲಿ 10,896 ಕಂದಾಯ ಗ್ರಾಮಗಳನ್ನು ಘೋಷಿಸುವ ಗುರಿ ಹೊಂದಲಾಗಿದ್ದು, ಕೇವಲ 3,354 ಗ್ರಾಮಗಳನ್ನು ಮಾತ್ರ ಘೋಷಿಸಲಾಗಿದೆ ಎಂದು ಮಾಹಿತಿ ನೀಡಿದರು.15 ದಿನಗಳೊಳಗೆ ಪ್ರಾಥಮಿಕ ಅಧಿಸೂಚನೆಗಾಗಿ ಕಳುಹಿಸಬೇಕು. ಅಂತಿಮ ಅಧಿಸೂಚನೆ ಪ್ರಕ್ರಿಯೆಯನ್ನೂ ಯಾವುದೇ ವಿಳಂಬವಿಲ್ಲದೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

## ಇಂಜಿನಿಯರಿಂಗ್ ಸೀಟು ರದ್ದುಗೊಳಿಸಲು ಬಹುಸಂಖ್ಯೆಯಲ್ಲಿ ಬಂದ ವಿದ್ಯಾರ್ಥಿಗಳು

ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ಇಂಜಿನಿಯರಿಂಗ್ ಸೀಟುಗಳನ್ನು ರದ್ದುಪಡಿಸುವಂತೆ ಒತ್ತಾಯಿಸಿ ನೂರಾರು ವಿದ್ಯಾರ್ಥಿಗಳು ಹಾಗೂ ಪೋಷಕರು ನಿನ್ನೆ ಗುರುವಾರ ಬೆಂಗಳೂರಿನ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಕಚೇರಿಗೆ ಆಗಮಿಸಿದ್ದರಿಂದ ಗೊಂದಲದ ವಾತಾವರಣ ನಿರ್ಮಾಣವಾಯಿತು. ಎರಡನೇ ಸುತ್ತಿನ ಸೀಟು ಹಂಚಿಕೆಯಲ್ಲಿ ಎಂಜಿನಿಯರಿಂಗ್ ಸೀಟು ಪಡೆದಿದ್ದು, ಕೌನ್ಸೆಲಿಂಗ್ ಪ್ರಕ್ರಿಯೆಯಿಂದ ಹೊರಗುಳಿಯಲು ಬಯಸುವ ವಿದ್ಯಾರ್ಥಿಗಳಿಗೆ ಇನ್ನು ಮುಂದೆ ಆನ್‌ಲೈನ್ ಮೂಲಕವೇ ಸೀಟು ರದ್ದುಗೊಳಿಸಲು ಏಇಂ ಅವಕಾಶ ನೀಡಲಿದೆ. ಸೀಟು ರದ್ದುಗೊಳಿಸಲು ಬಹಳ ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳು ಬರಬಹುದು ಎಂದು ನಿರೀಕ್ಷಿಸಿದ್ದೆವು.

ನಮ್ಮ ನಿರೀಕ್ಷೆಗೆ ವಿರುದ್ಧವಾಗಿ, ಪ್ರತಿಷ್ಠಿತ ಕಾಲೇಜುಗಳಲ್ಲಿ ಸೀಟು ಪಡೆದ ವಿದ್ಯಾರ್ಥಿಗಳೂ ಸೀಟು ರದ್ದುಗೊಳಿಸಲು ಆಗಮಿಸಿದ್ದರು ಎಂದು ಅಧಿಕಾರಿಯೊಬ್ಬರು ಹೇಳಿದರು. ಸುತ್ತಾಗಿದ್ದರಿಂದ ಹಾಗೂ ಪ್ರವೇಶವನ್ನು ಕಡ್ಡಾಯಗೊಳಿಸಿದ್ದರಿಂದ ಬಹಳ ಕಡಿಮೆ ಸಂಖ್ಯೆಯ ವಿದ್ಯಾರ್ಥಿಗಳು ಬರುವ ನಿರೀಕ್ಷೆಯಲ್ಲಿದ್ದೆವು. ಸೀಟು ಬ್ಲಾಕಿಂಗ್ ತಡೆಯುವ ಉದ್ದೇಶದಿಂದಸೀಟು ರದ್ದುಗೊಳಿಸಲು ವಿದ್ಯಾರ್ಥಿಗಳು ಖುದ್ದಾಗಿ ಹಾಜರಾಗುವಂತೆ ಸೂಚಿಸಿದ್ದೆವು ಎಂದು ಅಧಿಕಾರಿಗಳು ಹೇಳುತ್ತಾರೆ. ಆದರೆ, ಭಾರಿ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಹಾಗೂ ಪೋಷಕರು ಆಗಮಿಸಿದ ಹಿನ್ನೆಲೆಯಲ್ಲಿ ಆನ್‌ಲೈನ್ ಮೂಲಕ ಸೀಟು ರದ್ದುಗೊಳಿಸುವ ಅವಕಾಶ ಕಲ್ಪಿಸಿದೆ.

ಜತೆಗೆ, ಕಾಲೇಜುಗಳಿಗೆ ವರದಿ ಮಾಡುವ ಕೊನೆಯ ದಿನಾಂಕವನ್ನು ಆಗಸ್ಟ್ 31ರವರೆಗೆ ವಿಸ್ತರಿಸಲಾಗಿದ್ದು, ಸೀಟು ರದ್ದತಿ ಸೇರಿದಂತೆ ತಮ್ಮ ಆಯ್ಕೆಗಳನ್ನು ದಾಖಲಿಸಲು ಆ.29ರವರೆಗೆ ಅವಕಾಶ ನೀಡಲಾಗಿದೆ.ಹಲವು ವಿದ್ಯಾರ್ಥಿಗಳು ಸೀಟು ರದ್ದುಗೊಳಿಸಲು ಮುಂದಾಗಿರುವ ಹಿನ್ನೆಲೆಯಲ್ಲಿ ಆನ್‌ಲೈನ್‌ನಲ್ಲೇ ಈ ಅವಕಾಶ ನೀಡಲಾಗಿದೆ. ಆದರೆ, ಸೀಟು ಬ್ಲಾಕ್ ಮಾಡುವ ಉದ್ದೇಶದಿಂದ ಯಾರಾದರೂ ರದ್ದತಿ ಆಯ್ಕೆಯನ್ನು ಬಳಸಿಕೊಂಡರೆ, ಅವರ ವಿರುದ್ಧ ಕ್ರಿಮಿನಲ್ ಕ್ರಮ ಕೈಗೊಳ್ಳಲಾಗುವುದು ಎಂದು ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ಎಚ್ಚರಿಕೆ ನೀಡಿದರು.

## KPSC ಹಗರಣದಲ್ಲಿ ಸರ್ಕಾರ ಪಾಲುದಾರ: ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ

• ಉದಯವಾಹಿನಿ, ಬೆಂಗಳೂರು

KPSC ನೇಮಕಾತಿ ಹಗರಣಕ್ಕೆ ಸಂಬಂಧ ಹೊಂದಿದ್ದಾರೆ ಎನ್ನಲಾದ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಅವರನ್ನು ಕಾಂಗ್ರೆಸ್ ಸರ್ಕಾರ ರಕ್ಷಿಸುತ್ತಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ.

ಅಧಿಕಾರಿ ಗಂಗ್ವಾರ್ ನಾಪತ್ತೆಯಾಗಿದ್ದು, ಇದೀಗ ಸಿಐಡಿ ಮುಂದೆ ವಿಚಾರಣೆಗೆ ಹಾಜರಾಗಿದ್ದಾರೆ. ಸರ್ಕಾರದ ಗಮನಕ್ಕೆ ಬಾರದೆ ಹಿರಿಯ ಅಧಿಕಾರಿಯೊಬ್ಬರು ಹೇಗೆ ನಾಪತ್ತೆಯಾಗಲು ಸಾಧ್ಯ ಎಂದು ಪ್ರಶ್ನಿಸಿದರು. ರಾಜ್ಯದ ಆಡಳಿತ ಯಂತ್ರವೇ ಅವರನ್ನು ರಕ್ಷಿಸುವಲ್ಲಿ ಭಾಗಿಯಾಗಿದೆ ಎಂದು ಆರೋಪಿಸಿದರು.

ಈ ವಿಚಾರದಲ್ಲಿ ಸರ್ಕಾರದ ಪಾತ್ರವಿದೆ. ಸರ್ಕಾರವೇ ಇದರಲ್ಲಿ ಪಾಲುದಾರ. ಈ ಹಗರಣದಿಂದ ಸರ್ಕಾರವೇ ಲಾಭ ಪಡೆದಿದೆ ಎಂದು ಪ್ರಹ್ಲಾದ್ ಜೋಶಿ ಸುದ್ದಿಗಾರರೊಂದಿಗೆ ಮಾತನಾಡುತ್ತಾ ಆರೋಪಿಸಿದರು.

ಪಶುವೈದ್ಯಾಧಿಕಾರಿಗಳ ನೇಮಕಾತಿ ಪರೀಕ್ಷೆ ನಡೆದ ಸಂದರ್ಭದಲ್ಲಿ ಜ್ಞಾನೇಂದ್ರ ಕುಮಾರ್ ಗಂಗ್ವಾರ್ ಕರ್ನಾಟಕ ಲೋಕಸೇವಾ ಆಯೋಗದ ಪರೀಕ್ಷಾ ನಿಯಂತ್ರಕರಾಗಿದ್ದರು. ಈ ನೇಮಕಾತಿಯಲ್ಲಿ ಭಾರಿ ಪ್ರಮಾಣದ ಅಕ್ರಮ ನಡೆದಿದೆ ಎಂಬ ಆರೋಪಗಳು ಕೇಳಿಬಂದಿದ್ದವು.

## ಶಕ್ತಿ ಯೋಜನೆ ಸಕಸ್ ಬೆನ್ನಲ್ಲೇ ಸಾರಿಗೆ ಸಂಸ್ಥೆಗಳಿಗೆ ಶಾಕ್

• ಉದಯವಾಹಿನಿ, ಬೆಂಗಳೂರು

ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರದ ಅತ್ಯಂತ ಜನಪ್ರಿಯ ಗ್ಯಾರಂಟಿ ಯೋಜನೆಗಳಲ್ಲೊಂದಾದ 'ಶಕ್ತಿ ಯೋಜನೆ'ಯು ಭರ್ಜರಿ ಯಶಸ್ಸು ಕಂಡಿದೆಯಾದರೂ, ರಾಜ್ಯದ ಸಾರಿಗೆ ಸಂಸ್ಥೆಗಳನ್ನು ಮಾತ್ರ ತೀವ್ರ ಆರ್ಥಿಕ ಸಂಕಷ್ಟಕ್ಕೆ ದೂಡಿದೆ.

ಉಚಿತ ಬಸ್ ಪ್ರಯಾಣದ ಸಬ್ಸಿಡಿ ಬಾಕಿ ಮೊತ್ತವಾಗಿ ಸರ್ಕಾರದಿಂದ ಸಾರಿಗೆ ಸಂಸ್ಥೆಗಳಿಗೆ ಬರಬೇಕಾದ ಬರೋಬ್ಬರಿ ರೂ.5,650.95 ಕೋಟಿ ಹಣ ಇನ್ನೂ ಬಿಡುಗಡೆಯಾಗಿಲ್ಲ.ಬಾಕಿ ಮೊತ್ತ ಪಾವತಿಸಲು ಹೆಚ್ಚುವರಿ ಅನುದಾನ ನೀಡಲು ಸಾಧ್ಯವಿಲ್ಲ ಎಂದು ಹಣಕಾಸು ಇಲಾಖೆ ತಿಳಿಸಿರುವುದು ಸಾರಿಗೆ ನಿಗಮಗಳಿಗೆ ಸಂಕಷ್ಟ ತಂದಿದೆ.

2023ರ ಜೂನ್ 11ರಂದು ಯೋಜನೆ ಆರಂಭವಾದ ದಿನದಿಂದ 2026ರ ಜುಲೈ 31ರವರೆಗೆ ನಾಲ್ಕು ಸಾರಿಗೆ ನಿಗಮಗಳು ಶಕ್ತಿ ಯೋಜನೆಯಡಿ ಒಟ್ಟು ರೂ.20,955.96 ಕೋಟಿ ವೆಚ್ಚ ಮಾಡಿವೆ. ಇದಕ್ಕೆ ಪ್ರತಿಯಾಗಿ ಸರ್ಕಾರ ರೂ.15,305.01 ಕೋಟಿ ಬಿಡುಗಡೆ ಮಾಡಿದ್ದು, ಇನ್ನೂ ರೂ.5,650.95 ಕೋಟಿ ಬಾಕಿ ಉಳಿದಿದೆ ಎಂದು ಇತ್ತೀಚೆಗೆ ಮುಕ್ತಾಯಗೊಂಡ ವಿಧಾನ ಪರಿಷತ್ ಅಧಿವೇಶನದಲ್ಲಿ ಸಾರಿಗೆ ಸಚಿವ ಬೈರತಿ ಸುರೇಶ್ ನೀಡಿದ ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ.

# ಪ್ರಿಯಾಂಕ್ ಖರ್ಗೆ ರಾಜೀನಾಮೆಗೆ ಕುಮಾರಸ್ವಾಮಿ ಆಗ್ರಹ

## ಅಂತಿಮ ಆಯ್ಕೆ ಪ್ರಕ್ರಿಯೆ ಪೂರ್ಣಗೊಳ್ಳುವ ಮೊದಲೇ KPSCಯೊಳಗೆ OMR ಉತ್ತರ ಪತ್ರಿಕೆಗಳ ತಿರುಚುವಿಕೆ

• ಉದಯವಾಹಿನಿ, ಬೆಂಗಳೂರು

**1** ಪರಿಶೀಲನೆ ಮತ್ತು ಅಂತಿಮ ಆಯ್ಕೆ
**2** OMR ಉತ್ತರ ಪತ್ರಿಕೆಗಳ ತಿರುಚುವಿಕೆ
**3** ಸೆಪ್ಟೆಂಬರ್‌ನಲ್ಲಿ KPSC AEE ನೇಮಕಾತಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಕರ್ನಾಟಕ ಲೋಕಸೇವಾ ಆಯೋಗ (ಮೂಲಕ ನಡೆದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (, ಗ್ರೇಡ್-1 ಹುದ್ದೆಗಳ ನೇಮಕಾತಿಯಲ್ಲಿ ಅಕ್ರಮ ನಡೆದಿದೆ ಎಂಬ ಆರೋಪಗಳನ್ನು ರಾಜ್ಯ ಸರ್ಕಾರ ನಿರ್ಲಕ್ಷಿಸಿದೆ ಎಂದು ಕೇಂದ್ರ ಸಚಿವ ಹಾಗೂ ಜೆಡಿಎಸ್ ನಾಯಕ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದರು. ಬೆಂಗಳೂರಿನ ಜೆ.ಪಿ. ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಕುಮಾರಸ್ವಾಮಿ, ಅಂತಿಮ ಆಯ್ಕೆ ಪ್ರಕ್ರಿಯೆ ಪೂರ್ಣಗೊಳ್ಳುವ ಮೊದಲೇ ಅಯೊಳಗ ಉತ್ತರ ಪತ್ರಿಕೆಗಳ ತಿರುಚುವಿಕೆ, ಕಾಣೆಯಾಗಿರುವ ಅಅಖಿಗಿ ದೃಶ್ಯಾವಳಿಗಳು ಹಾಗೂ ನಿಯಮ ಉಲ್ಲಂಘನೆಗಳ ಕುರಿತು ಆಕ್ಷೇಪಗಳು ವ್ಯಕ್ತವಾಗಿದ್ದವು. ಆದರೂ ನೇಮಕಾತಿಗೆ ಅವಕಾಶ ನೀಡಲಾಗಿದೆ ಎಂದು ಆರೋಪಿಸಿದರು.

ಆ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಜವಾಬ್ದಾರಿ ಹೊಂದಿದ್ದ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದ ಕುಮಾರಸ್ವಾಮಿ, ಏಕಖಅ ನೇಮಕಾತಿಗಳಲ್ಲಿನ ಅಕ್ರಮಗಳ ಕುರಿತು ಉನ್ನತ ಮಟ್ಟದ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು. 2023ರ ಸೆಪ್ಟೆಂಬರ್‌ನಲ್ಲಿ ನೇಮಕಾತಿಯ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಿತ್ತು. ಬಳಿಕ ಕೆಲ ಅಭ್ಯರ್ಥಿಗಳ ಆಯ್ಕೆ ಕುರಿತು ದೂರು ಸಲ್ಲಿಕೆಯಾಗಿದ್ದು, ಅವರ ಉತ್ತರ ಪತ್ರಿಕೆಗಳು, ಕಾರ್ಬನ್ ಪ್ರತಿಗಳು ಹಾಗೂ ಪರೀಕ್ಷಾ ಕೇಂದ್ರಗಳ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸುವಂತೆ ಮನವಿ ಮಾಡಲಾಗಿತ್ತು.

ದೂರು ಹಲವು ಸಭೆಗಳಲ್ಲಿ ಚರ್ಚೆಯಾಗಿದ್ದು, ಸಂಬಂಧಿತ ದಾಖಲೆಗಳನ್ನು



ಉದಯವಾಹಿನಿ ಚಿತ್ರ

> ಪರೀಕ್ಷೆ ನಡೆಸುವಲ್ಲಿ ಪ್ರಿಯಾಂಕ್ ಖರ್ಗೆ ನೇರವಾಗಿ ಭಾಗಿಯಾಗಿರದಿದ್ದರೂ, ಅಕ್ರಮಗಳ ಕುರಿತು ಇಲಾಖೆಗೆ ಮಾಹಿತಿ ಬಂದ ಬಳಿಕ ಕೈಗೊಂಡ ನಿರ್ಧಾರಗಳಿಗೆ ಸಚಿವರೇ ಹೊಣೆಗಾರರು ಎಂದು ಹೇಳಿದರು.- ಕುಮಾರಸ್ವಾಮಿ

ಪರಿಶೀಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿತ್ತು ಎಂದು ಕುಮಾರಸ್ವಾಮಿ ಹೇಳಿದರು. ಕೆಲವು ಅಭ್ಯರ್ಥಿಗಳಿಗೆ ಸಂಬಂಧಿಸಿದ ಸಿಸಿಟಿವಿ ದೃಶ್ಯಾವಳಿಗಳು ಲಭ್ಯವಿರಲಿಲ್ಲ ಹಾಗೂ ಪರಿಶೀಲನೆಯ ವೇಳೆ ಕೆಲವು ವ್ಯತ್ಯಾಸಗಳು ಕಂಡುಬಂದ ಹಿನ್ನೆಲೆಯಲ್ಲಿ ಮೂವರು ಸದಸ್ಯರ ಉಪಸಮಿತಿಯನ್ನು ರಚಿಸಲಾಗಿತ್ತು ಎಂದು ತಿಳಿಸಿದರು.

ಉಪಸಮಿತಿಯು ಅಂದಿನ ಕೆಪಿಎಸ್‌ಸಿ ಕಾರ್ಯದರ್ಶಿಯಿಂದ ಸಹಕಾರ ದೊರೆಯುತ್ತಿಲ್ಲ ಎಂದು ಆಕ್ಷೇಪಿಸಿತ್ತು. ಆಯೋಗದ ನಿರ್ದೇಶನಗಳನ್ನು ಜಾರಿಗೊಳಿಸದೆ ತನಿಖೆ ಮುಂದುವರಿಸಲು ಸಾಧ್ಯವಿಲ್ಲ ಎಂದು ಸಮಿತಿ ತಿಳಿಸಿತ್ತು ಎಂದು ಕುಮಾರಸ್ವಾಮಿ ಈ ಪರಿಶೀಲನೆ ನಡೆಯುತ್ತಿರುವಾಗಲೇ ಅಂತಿಮ ಆಯ್ಕೆ ಪಟ್ಟಿಯನ್ನು ಹೇಗೆ ಪ್ರಕ್ರಿಯೆಗೊಳಿಸಲಾಯಿತು ಎಂದು ಅವರು ಪ್ರಶ್ನಿಸಿದರು.

ಕೆಪಿಎಸ್ ಸಿಯ ಪತ್ರವ್ಯವಹಾರವನ್ನು ಉಲ್ಲೇಖಿಸಿದ ಕುಮಾರಸ್ವಾಮಿ, 2024ರ ಜನವರಿ 31ರಂದು ಕೆಪಿಎಸ್‌ಸಿ ಅಧ್ಯಕ್ಷರು ಕಾರ್ಯದರ್ಶಿಗೆ ಬರೆದ ಪತ್ರದಲ್ಲಿ ಉಪಸಮಿತಿಯ ನಿರ್ಧಾರಕ್ಕೆ ಒಳಪಟ್ಟು ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ಅನುಮತಿ ನೀಡಲಾಗಿತ್ತು ಎಂದು ಹೇಳಿದರು. ಆದರೆ, ಕಾರ್ಯದರ್ಶಿಯವರು ಇದನ್ನು ಅಂತಿಮ ಅನುಮತಿ ಎಂದು ಪರಿಗಣಿಸಿ, ಆಯೋಗದ ಅಂತಿಮ ಒಪ್ಪಿಗೆ ಪಡೆಯದೆ ಪಟ್ಟಿಯನ್ನು ಸರ್ಕಾರಕ್ಕೆ ಕಳುಹಿಸಿದ್ದಾರೆ ಎಂದು ಆರೋಪಿಸಿದರು. ಕಾರ್ಯದರ್ಶಿಯವರು ತರಾತುರಿಯಲ್ಲಿ ನಡೆದುಕೊಂಡು, ಆಯೋಗದ ಅನುಮತಿ ಪಡೆಯದೆ ಅಂತಿಮ ಆಯ್ಕೆ ಪಟ್ಟಿಯನ್ನು ಮುಂದಿನ ಕ್ರಮಕ್ಕಾಗಿ ಸರ್ಕಾರಕ್ಕೆ ಕಳುಹಿಸಿದ್ದಾರೆ.

ಬಳಿಕ ಆಯೋಗವು ಈ ರೀತಿ ಆಯ್ಕೆ ಪಟ್ಟಿಯನ್ನು ಕಳುಹಿಸಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿ ಮುಖ್ಯ ಕಾರ್ಯದರ್ಶಿಗೆ ಪತ್ರ ಬರೆದಿತ್ತು ಎಂದು ಅವರು ಹೇಳಿದರು. ಉಪಸಮಿತಿಯ ಸದಸ್ಯರು ಕೂಡ ತಮ್ಮ ಪರಿಶೀಲನೆ ಪೂರ್ಣಗೊಳ್ಳುವ ಮೊದಲೇ ಆಯ್ಕೆ ಪಟ್ಟಿಯನ್ನು ಕಳುಹಿಸಲಾಗಿದೆ ಎಂದು ಆಕ್ಷೇಪಿಸಿದ್ದರು ಎಂದು ಕುಮಾರಸ್ವಾಮಿ ತಿಳಿಸಿದರು. ಈ ಹಿನ್ನೆಲೆಯಲ್ಲಿ ಪ್ರಿಯಾಂಕ್ ಖರ್ಗೆ ತಕ್ಷಣ ರಾಜೀನಾಮೆ ನೀಡಬೇಕು ಎಂದು ಕುಮಾರಸ್ವಾಮಿ ಆಗ್ರಹಿಸಿದರು. ಕುಮಾರಸ್ವಾಮಿ ಉಲ್ಲೇಖಿಸಿದ ನ್ಯಾಯಾಲಯದ ಆದೇಶದ ಭಾಗದ ಪ್ರಕಾರ, ತನಿಖೆಯನ್ನು ಸಿಬಿಐಗೆ ವಹಿಸುವ ಸಾಧ್ಯತೆಯನ್ನು ಪರಿಗಣಿಸುವುದಾಗಿ ನ್ಯಾಯಾಲಯವು ತಿಳಿಸಿ, ಮುಂದಿನ ವಿಚಾರಣೆಯ ವೇಳೆ ಸಿಬಿಐಯ ಸ್ಥಾಯಿ ವಕೀಲರು ಲಭ್ಯವಿರುವಂತೆ ಸೂಚಿಸಿತ್ತು.

> ಅವರು ನೇರವಾಗಿ ಭಾಗಿಯಾಗಿದ್ದರೋ ಇಲ್ಲವೋ, ಅದು ಅವರ ಜವಾಬ್ದಾರಿಯಾಗಿತ್ತು.ನೇಮಕಾತಿ ನಡೆದಾಗ ಈ ವಿಚಾರಗಳು ಅವರಿಗೆ ತಿಳಿದಿರಲಿಲ್ಲವೇ? ನೇಮಕಾತಿಯನ್ನು ತಡೆಯಬೇಕಾಗಿರಲಿಲ್ಲವೇ ಎಂದು ಪ್ರಶ್ನಿಸಿದರು.- ಕುಮಾರಸ್ವಾಮಿ

### ತನಿಖೆಸಿಬಿಐಗೆ ವರ್ಗಾಯಿಸುವಂತೆ ಮನವಿ

**ಕರ್ನಾಟಕ ಹೈಕೋರ್ಟ್‌ನಲ್ಲಿ ನಡೆದ ವಿಚಾರಣೆಯನ್ನೂ ಕುಮಾರಸ್ವಾಮಿ ಉಲ್ಲೇಖಿಸಿದರು. 2025ರ ಮಾರ್ಚ್ 19ರಂದು ನಡೆದ ವಿಚಾರಣೆಯಲ್ಲಿ ಅರ್ಜಿದಾರರ ಪರ ವಕೀಲರು ತನಿಖೆಯನ್ನು ಸಿಬಿಐಗೆ ವರ್ಗಾಯಿಸುವಂತೆ ಮನವಿ ಮಾಡಿದ್ದರು ಎಂದು ಅವರು ಹೇಳಿದರು.**

# ಅಂಬೇಡ್ಕರ್ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗಲೇ ನಿಜವಾದ ಗೌರವ

• ಉದಯವಾಹಿನಿ, ಬೆಂಗಳೂರು

ಸಮಾಜದಲ್ಲಿ ಜಾತಿ, ಧರ್ಮದ ಹೆಸರಿನಲ್ಲಿ ವಿಭಜನೆ ಮಾಡುವ ಮನೋಭಾವಕ್ಕೆ ಅವಕಾಶ ನೀಡದೆ, ಎಲ್ಲರೂ ಸಮಾನರು ಎಂಬ ಮಾನವತಾ ಮೌಲ್ಯವನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಮಹನೀಯರಿಗೆ ನಿಜವಾದ ಗೌರವ ಸಲ್ಲಿಸಿದಂತಾಗುತ್ತದೆ ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವತಿಯಿಂದ ಕೇಂದ್ರ ಕಚೇರಿ ಆವರಣದಲ್ಲಿರುವ ಡಾ. ರಾಜ್‌ಕುಮಾರ್ ಗಾಜಿನ ಮನೆಯಲ್ಲಿ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಪೌರಕಾರ್ಮಿಕರ ದಿನಾಚರಣೆ 2026'' ಕಾರ್ಯಕ್ರಮಕ್ಕೆ ಅವರು ಚಾಲನೆ ನೀಡಿದರು. ಇದಕ್ಕೂ ಮುನ್ನ ಜಿಬಿಎ ಕೇಂದ್ರ ಕಚೇರಿ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕೃಷ್ಣ ಬೈರೇಗೌಡ, ಜಿಬಿಎ ಹಾಗೂ ಐದು ನಗರ ಪಾಲಿಕೆಗಳು ಒಟ್ಟಾಗಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಹಾಗೂ ಪೌರಕಾರ್ಮಿಕರ ದಿನಾಚರಣೆಯನ್ನು ಆಚರಿಸುತ್ತಿವೆ ಎಂದು ತಿಳಿಸಿದರು. ಜವಾಬ್ದಾರಿ ವಹಿಸಿಕೊಂಡ ತಕ್ಷಣವೇ ಕಾರ್ಯಕ್ರಮ ಆಯೋಜಿಸಲು ದಿನಾಂಕ ನಿಗದಿಪಡಿಸಲಾಗಿತ್ತು. ಎಸ್‌ಐಆರ್ ಪ್ರಕ್ರಿಯೆಯ ಕಾರಣದಿಂದ ಆಚರಣೆ ವಿಳಂಬವಾಗಿದ್ದು, ಇದೀಗ ಆದ್ಯತೆಯ ಮೇರೆಗೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

''ಡಾ. ಅಂಬೇಡ್ಕರ್ ಅವರು ಯಾವುದೇ ಒಂದು ಜಾತಿ ಅಥವಾ ಸಮುದಾಯಕ್ಕೆ ಸೀಮಿತವಾದವರಲ್ಲ. ಬುದ್ಧನ ಕಾಲದಿಂದಲೇ ನಮ್ಮ ದೇಶದಲ್ಲಿ ಮಾನವ ಧರ್ಮದ ಪರಂಪರೆ ಜೀವಂತವಾಗಿದೆ. ಮನುಷ್ಯರೆಲ್ಲರೂ ಒಂದೇ; ಗಾಳಿ, ನೀರು ಮತ್ತು ದೇಹ ಎಲ್ಲವೂ ಒಂದೇ ಎಂಬ ಅರಿವು ನಮ್ಮಲ್ಲಿರಬೇಕು'' ಎಂದು ಹೇಳಿದರು.



ಉದಯವಾಹಿನಿ ಚಿತ್ರ

### ಸಮಾಜದಲ್ಲಿ ಸಂಪೂರ್ಣ ಸಮಾನತೆ ಸಾಧ್ಯವಾಗಿಲ್ಲ

**ಬಸವಣ್ಣ, ಮಹಾತ್ಮ ಗಾಂಧೀಜಿ ಹಾಗೂ ಕುವೆಂಪು ಸೇರಿದಂತೆ ಅನೇಕ ಮಹನೀಯರು ಮಾನವತಾ ಧರ್ಮ ಮತ್ತು ಸಮಾನತೆಯ ಸಂದೇಶವನ್ನು ಪ್ರತಿಪಾದಿಸಿದ್ದಾರೆ. ಆದರೆ ಇಂದಿಗೂ ಸಮಾಜದಲ್ಲಿ ಸಂಪೂರ್ಣ ಸಮಾನತೆ ಸಾಧ್ಯವಾಗಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು.**

## ಪರಪ್ಪನ ಅಗ್ರಹಾರ ವಿಡಿಯೋ ತೋರ್ಸಿದ್ದೇ ತೋರ್ಸಿದ್ದು, ಗೃಹ ಇಲಾಖೆ ಯಾಕ್ರೀ ನಡೆಸ್ತಿದ್ದೀರಿ

• ಉದಯವಾಹಿನಿ, ಬೆಂಗಳೂರು

ಪರಪ್ಪನ ಅಗ್ರಹಾರ ಜೈಲಿನ ವಿಡಿಯೋವನ್ನು ವಾರಗಟ್ಟಲೇ ತೋರ್ಸಿದ್ದೇ ತೋರಿಸಿದ್ದು, ಗೃಹ ಇಲಾಖೆಯನ್ನು ಸ್ವಚ್ಛ ಮಾಡ್ತೀನಿ, ನಮ್ಮ ಸರ್ಕಾರ ಯಾರನ್ನೂ ರಕ್ಷಣೆ ಮಾಡುವುದಿಲ್ಲ ಅಂತಾ ಹೇಳಿದ್ರಿ. ಆದರೆ ಏನನ್ನೂ ಮಾಡಲಿಲ್ಲ ಎಂದು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಪ್ರಿಯಾಂಕ್ ಖರ್ಗೆ ವಿರುದ್ಧ ಹರಿ ಹಾಯ್ದಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾರ್ಯಾರ ಧ್ವನಿಯನ್ನು ಹೇಗೆ ಅಡಗಿಸಿಬೇಕೆಂದು ಪ್ಲಾನ್ ಮಾಡ್ತೀದ್ದೀರಾ. ನಮ್ಮ ಧ್ವನಿಯನ್ನು ನೀವು ನಿಲ್ಲಿಸಲು ಆಗೋದಿಲ್ಲ, ಕೆಪಿಎಸ್ ಸಿ ಹಗರಣ ಗ್ಯಾನೇಂದ್ರ ಎಲ್ಲಿದ್ದಾನೋ ಗೊತ್ತಿಲ್ಲ ಎಂದು ಹೇಳುತ್ತಿರಲ್ಲ, ಹಾಗಿದ್ದ ಮೇಲೆ ಗೃಹ ಇಲಾಖೆಯನ್ನು ಏಕೆ ನಡೆಸುತ್ತೀರಿ ಎಂದು ಪ್ರಶ್ನಿಸಿದ್ದಾರೆ. ರಾಜ್ಯದಿಂದ ಆತ ಓಡಿ ಹೋಗಲು ನೀವೇ ಅವಕಾಶ ಮಾಡಿಕೊಟ್ಟಿದ್ದೀರಿ,



ಉದಯವಾಹಿನಿ ಚಿತ್ರ

ಏನಾದರೂ ನಿಮಗೆ ನಾಲಗೆಗೆ ಅಲ್ಪಸ್ವಲ್ಪ ಗೌರವ ಕೊಡೋದಿದ್ದ ಆದರೆ ಕೂಡಲೇ ರಾಜಿನಾಮೆ ನೀಡಿ ಎಂದು ಕುಮಾರಸ್ವಾಮಿ ಆಗ್ರಹಿಸಿದ್ದಾರೆ. ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಕಳೆದ ಹಲವು ದಿನಗಳಿಂದ ಏನು ನಡೆಯುತ್ತಿದೆ ಎಂಬುದನ್ನು ನಾನು ಗಮನಿಸುತ್ತಿದ್ದೇನೆ. ಪಶುವೈದ್ಯಕೀಯ ವೈದ್ಯ ಹುದ್ದೆಗೆ, ನೇಮಕಾತಿ ಮಾಡಲು ಮತ್ತು ಕೆಪಿಎಸ್‌ಸಿ ಪ್ರಕ್ರಿಯೆಯಲ್ಲಿ ಯಶಸ್ವಿಯಾಗಲು ಅವರು 80 ಲಕ್ಷ ರೂ. ನಿಗದಿಪಡಿಸಿದ್ದಾರೆ ಎಂದು ಯುವಕನೊಬ್ಬ ಆರೋಪಿಸಿದ್ದಾರೆ. ಎಂದು ಕುಮಾರಸ್ವಾಮಿ ಹೇಳಿದರು.

ಕಳೆದ ವಾರ ಜಾರಿ ನಿರ್ದೇಶನಾಲಯವು ಹಲವಾರು ಸ್ಥಳಗಳ ಮೇಲೆ ದಾಳಿ ನಡೆಸಿದೆ ಎಂದು ಅವರು ಹೇಳಿದರು.

## 7 ತಿಂಗಳಲ್ಲಿ 558 ಕೋಟಿ ಲೂಟಿ, ಗೋಲ್ಡನ್ ಅವರ್‌ನಿಂದ 191 ಕೋಟಿ ವಾಪಸ್!

• ಉದಯವಾಹಿನಿ, ಬೆಂಗಳೂರು

ಒಂದು ಸಣ್ಣ ಕ್ಲಿಕ್, ಅನಾಮಧೇಯ ಕರೆಯ ಮಾತು ಅಥವಾ ಎರಡು ಪಟ್ಟು ಲಾಭದ ಆಮಿಷ ಸಾಕು, ಕಷ್ಟಪಟ್ಟು ದುಡಿದ ಲಕ್ಷಾಂತರ ರೂಪಾಯಿ ಬ್ಯಾಂಕ್ ಖಾತೆಯಿಂದ ಮಾಯವಾಗಲು. ಹಿಗೆಯೇ, ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಸೈಬರ್ ಅಪರಾಧಿಗಳು ನಿರಂತರವಾಗಿ ಬಲೆ ಬೀಸುತ್ತಿದ್ದು, ಜನರನ್ನು ಕ್ಷಣಮಾತ್ರದಲ್ಲಿ ಕಂಗಾಲಾಗಿಸುತ್ತಿದ್ದಾರೆ.

ರಾಜಧಾನಿ ಬೆಂಗಳೂರಿನಲ್ಲಿ ಕೇಳದ 7 ತಿಂಗಳಲ್ಲಿ ಅಂದರೆ 2026ರ ಜು.ಅಂತ್ಯದವರೆಗೆ ನಗರದಲ್ಲಿ ಒಟ್ಟು 4,712 ಸೈಬರ್ ವಂಚನೆ ಪ್ರಕರಣಗಳು ದಾಖಲಾಗಿದ್ದು, ಬರೋಬ್ಬರಿ 558 ಕೋಟಿ ಕಳೆದುಕೊಂಡಿದ್ದಾರೆ. ಇಂಜಿನಿಯರ್, ವೈದ್ಯರು, ಶಿಕ್ಷಕರು, ಬ್ಯಾಂಕ್ ಸಿಬ್ಬಂದಿ, ಹಿರಿಯ ನಾಗರಿಕರು ಹಾಗೂ ಗೃಹಿಣಿಯರು ಸೇರಿದಂತೆ ಹಲವರನ್ನು ಗುರಿಯಾಗಿಸಿ ಸೈಬರ್ ವಂಚನೆಯ ಜಾಲ ಹೆಚ್ಚುತ್ತಿದೆ.

ಅದರಂತೆ, ಕೇವಲ ಕಳೆದ 7 ತಿಂಗಳ ಅವಧಿಯಲ್ಲಿ ಸಾರ್ವಜನಿಕರು ಬರೋಬ್ಬರಿ 558 ಕೋಟಿ ರೂಪಾಯಿಗೂ ಅಧಿಕ ಹಣವನ್ನು ಸೈಬರ್ ಚೋರರ ಕೈಯಲ್ಲಿ ಕಳೆದುಕೊಂಡಿದ್ದಾರೆ.

ಅದರಂತೆ, ಪ್ರತಿದಿನ ಸರಾಸರಿ 22 ಸೈಬರ್ ವಂಚನೆ ಪ್ರಕರಣಗಳು ದಾಖಲಾಗುತ್ತಿದ್ದು, ಪ್ರತಿನಿತ್ಯ ಸುಮಾರು 2.63 ಕೋಟಿ ರೂಪಾಯಿ ವಂಚನೆಯಾಗುತ್ತಿದೆ ಎಂದು ಗೃಹ ಇಲಾಖೆಯ ಅಧಿಕೃತ ಅಂಕಿಅಂಶಗಳಿಂದ ಬೆಳಕಿಗೆ ಬಂದಿದೆ.

# ಜಾಗೃತರಾಗದ ಸೈಟ್ ಮಾಲೀಕರು; ಕೇವಲ ಶೇ. 30 ರಷ್ಟು ಖಾಲಿ ನಿವೇಶನ ಮಾತ್ರ ಸ್ವಚ್ಛ

ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಖಾಲಿ ಬಿದ್ದಿರುವ ಸೈಟ್‌ಗಳ ಮಾಲೀಕರಿಗೆ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಬಿಗ್ ಶಾಕ್ ನೀಡಿದೆ. ಸರ್ಕಾರದ ಸರಣಿ ಗಡುವುಗಳ ಹೊರತಾಗಿಯೂ ಬೆಂಗಳೂರಿನ ಕೇವಲ ಶೇ. 30 ರಷ್ಟು ಖಾಲಿ ನಿವೇಶನಗಳನ್ನು ಮಾತ್ರ ಮಾಲೀಕರು ಸ್ವಚ್ಛಗೊಳಿಸಿದ್ದು, ಬಾಕಿ ಉಳಿದಿರುವ ಶೇ. 70 ರಷ್ಟು ಜಾಗಗಳಿಗಾಗಿ ಜಿಬಿಎ ಇಂದಿನಿಂದ ಕಡ್ಡಾಯ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿದೆ.

ಇನ್ಮುಂದೆ ಅಧಿಕಾರಿಗಳೇ ಖಾಲಿ ಸೈಟ್‌ಗಳನ್ನು ಸ್ವಚ್ಛಗೊಳಿಸಲಿದ್ದು, ಅದರ ಸಂಪೂರ್ಣ ವೆಚ್ಚವನ್ನು ಮಾಲೀಕರ ಆಸ್ತಿ ತೆರಿಗೆಯಲ್ಲೇ ವಸೂಲಿ ಮಾಡಲಾಗುವುದು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಖಡಕ್ ಎಚ್ಚರಿಕೆ ನೀಡಿದ್ದಾರೆ.

ದೊಮ್ಮಲೂರಿನಲ್ಲಿ ಖಾಲಿ ನಿವೇಶನಗಳ ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿದ ಬಳಿಕ ಮಾತನಾಡಿದ ಅವರು, ಮಾಲೀಕರು ತಮ್ಮ ನಿವೇಶನಗಳನ್ನು ಸ್ವತಃ ಸ್ವಚ್ಛಗೊಳಿಸುವುದು ಉತ್ತಮ. ಜಿಬಿಎ ಕ್ರಮ ಕೈಗೊಂಡು ಸ್ವಚ್ಛಗೊಳಿಸುವುದಕ್ಕಿಂತ ಕಡಿಮೆ ವೆಚ್ಚದಲ್ಲಿ ಮಾಲೀಕರೇ ಈ ಕೆಲಸ ಮಾಡಿಸಿಕೊಳ್ಳಬಹುದು ಎಂದು ಹೇಳಿದರು. ಖಾಲಿ ನಿವೇಶನಗಳನ್ನು ಜಿಬಿಎ ಸ್ವಚ್ಛಗೊಳಿಸಿದರೆ, ಅದರ ಸ್ವಚ್ಛತೆ ಹಾಗೂ ತ್ಯಾಜ್ಯ ಸಾಗಣೆ ವೆಚ್ಚವನ್ನು ಆಸ್ತಿ ತೆರಿಗೆಯೊಂದಿಗೆ ಮಾಲೀಕರಿಂದಲೇ ವಸೂಲಿ ಮಾಡಲಾಗುವುದು. ಆದರೆ, ಪದೇಪದೆ ನಿಯಮ ಉಲ್ಲಂಘಿಸುವವರ ವಿರುದ್ಧ ದಂಡ ವಿಧಿಸಲಾಗುವುದು ಎಂದು ಎಚ್ಚರಿಸಿದರು. ಜಿಬಿಎ ಸ್ವಚ್ಛಗೊಳಿಸುವವರೆಗೆ ಕಾಯುವುದಕ್ಕಿಂತ ಕಡಿಮೆ ವೆಚ್ಚದಲ್ಲಿ ನೀವೇ ಕೆಲಸ ಮಾಡಿಸಿಕೊಳ್ಳಬಹುದು. ನಿಮ್ಮ ನಿವೇಶನಗಳನ್ನು ಸ್ವಚ್ಛವಾಗಿಟ್ಟುಕೊಳ್ಳಿ ಹಾಗೂ ನಗರವನ್ನು ಸ್ವಚ್ಛವಾಗಿಡುವ ಪ್ರಯತ್ನಕ್ಕೆ ಕೈಜೋಡಿಸಿ. ತಮ್ಮ ನಿವೇಶನಗಳನ್ನು ಸ್ವಚ್ಛಗೊಳಿಸಿರುವವರಿಗೆ ನಾನು ವೈಯಕ್ತಿಕವಾಗಿ ಧನ್ಯವಾದ ಪತ್ರ ಕಳುಹಿಸುತ್ತೇನೆ' ಎಂದು ಹೇಳಿದರು.

### ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸಿಲ್ಲ.

**ನಿರ್ದೇಶನದ ಹೊರತಾಗಿಯೂ ಅನೇಕ ಮಾಲೀಕರು ಖಾಲಿ ನಿವೇಶನಗಳನ್ನು ಸ್ವಚ್ಛಗೊಳಿಸಿಲ್ಲ. ಇದರಿಂದ ಅಲ್ಲಿ ಕಳೆ-ಗಿಡಗಳು ಬೆಳೆದು ವಿವಿಧ ಸಮಸ್ಯೆಗಳು ಉಂಟಾಗುತ್ತಿವೆ. ಇಂತಹ ನಿವೇಶನಗಳು ಸೊಳ್ಳೆ, ನೊಣ, ಹಾವು ಹಾಗೂ ಇಲಿಗಳಿಗೆ ಆಶ್ರಯ ತಾಣಗಳಾಗಿವೆ.**

# 175 ತಾಲ್ಲೂಕುಗಳನ್ನು ಬರ ಎಂದು ಘೋಷಿಸಿ: ಆರ್. ಅಶೋಕ್

## ಬರದಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಪ್ರತಿ ಎಕರೆಗೆ ೫೦ ಸಾವಿರ ಪರಿಹಾರ ನೀಡಬೇಕು ಎಂದು ಅವರು ಆಗ್ರಹಿಸಿದರು

• ಉದಯವಾಹಿನಿ, ಬೆಂಗಳೂರು

**1** ಈಗಾಗಲೇ ಬರಗಾಲ ಎಂದು ಗುರುತಿಸಿರುವ
**2** ಬದಲಿಗೆ ರಾಜ್ಯದ 175 ತಾಲೂಕುಗಳನ್ನು
**3** ಪ್ರತಿ ತಾಲ್ಲೂಕಿಗೆ 50 ಕೋಟಿ ರೂ ಅನುದಾನ

ಬರ ಪರಿಸ್ಥಿತಿಗೆ ರಾಜ್ಯ ಸರ್ಕಾರ ವಿಳಂಬವಾಗಿ ಸ್ಪಂದಿಸುತ್ತಿದೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಹಾಗೂ ಬಿಜೆಪಿ ನಾಯಕ ಆರ್. ಅಶೋಕ್ ತೀವ್ರ ವಾಗ್ದಾಳಿ ನಡೆಸಿದರು. ಇದೇ ವೇಳೆ ಸಚಿವ ಬಿ. ನಾಗೇಂದ್ರ ಅವರು ತಕ್ಷಣ ರಾಜೀನಾಮೆ ನೀಡಬೇಕು ಎಂಬ ಪ್ರತಿಪಕ್ಷದ ಬೇಡಿಕೆಯನ್ನು ಅವರು ಪುನರುಚ್ಚರಿಸಿದರು. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಈಗಾಗಲೇ ಬರಗಾಲ ಎಂದು ಗುರುತಿಸಿರುವ 101 ತಾಲ್ಲೂಕುಗಳ ಬದಲಿಗೆ ರಾಜ್ಯದ 175 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಬರದಿಂದ ಸಂಕಷ್ಟಕ್ಕೊಳಗಾಗಿರುವ ರೈತರಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ 1 ಲಕ್ಷ ರೂವರೆಗಿನ ಕೃಷಿ ಸಾಲವನ್ನು ಮನ್ನಾ ಮಾಡಬೇಕು ಎಂದು ಅಶೋಕ್ ಆಗ್ರಹಿಸಿದ್ದಾರೆ. ಕುಡಿಯುವ ನೀರು ಪೂರೈಕೆ ಹಾಗೂ ಜಾನುವಾರುಗಳಿಗೆ ಅಗತ್ಯ ಪ್ರಮಾಣದ ನೀರು ಒದಗಿಸಲು ಪ್ರತಿ ತಾಲ್ಲೂಕಿಗೆ 50 ಕೋಟಿ ರೂ ಅನುದಾನ ಮೀಸಲಿಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಬರದಿಂದ ಬೆಳೆ ನಷ್ಟ ಅನುಭವಿಸಿರುವ ರೈತರಿಗೆ ಪ್ರತಿ ಎಕರೆಗೆ 50 ಸಾವಿರ ಪರಿಹಾರ ನೀಡಬೇಕು ಎಂದು ಅವರು ಆಗ್ರಹಿಸಿದರು. ಬರಪೀಡಿತ ಪ್ರದೇಶಗಳಲ್ಲಿನ ರೈತರ ನೆರವಿಗೆ ಸರ್ಕಾರ ತಕ್ಷಣ ಕ್ರಮ



ಉದಯವಾಹಿನಿ ಚಿತ್ರ

ಕೈಗೊಳ್ಳಬೇಕು. ಜತೆಗೆ ಕುಡಿಯುವ ನೀರು ಹಾಗೂ ಜಾನುವಾರುಗಳ ನೀರಿನ ಅಗತ್ಯಗಳನ್ನು ಸಮರ್ಪಕವಾಗಿ ಪೂರೈಸಬೇಕು ಎಂದು ಅಶೋಕ್ ಒತ್ತಾಯಿಸಿದರು. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ನಾವು ಪ್ರತಿದಿನವೂ ಪ್ರತಿಭಟನೆ ನಡೆಸಿದ್ದೇವೆ. ನಾಗೇಂದ್ರ ಅವರ ರಾಜೀನಾಮೆಯನ್ನು ಅಂಗೀಕರಿಸುವಂತೆ ಮುಖ್ಯಮಂತ್ರಿಗಳಿಗೆ ಎಚ್ಚರಿಕೆ ನೀಡುತ್ತೇನೆ. ಇಲ್ಲದಿದ್ದರೆ ವಿಧಾನಸಭೆಯ ಒಳಗಾಗಲಿ ಅಥವಾ ಹೊರಗೆ ಬೀದಿಗಳಲ್ಲಾಗಲಿ ನಮ್ಮ ಹೋರಾಟವನ್ನು ನಿಲ್ಲಿಸುವುದಿಲ್ಲ ಎಂದು ಅಶೋಕ್ ಹೇಳಿದರು. ಇದರ ನಡುವೆ, ರಾಜ್ಯದಲ್ಲಿ ಉಂಟಾಗಿರುವ ಮಳೆ ಕೊರತೆಯನ್ನು ನೀಗಿಸುವ ಹಾಗೂ ತೀವ್ರ ಕುಡಿಯುವ ನೀರಿನ ಅಭಾವವನ್ನು ತಪ್ಪಿಸುವ ಉದ್ದೇಶದಿಂದ ಕರ್ನಾಟಕ ಸರ್ಕಾರ ಮೋಡ ಬಿತ್ತನೆ ಕಾರ್ಯಾಚರಣೆಯನ್ನು ತ್ವರಿತಗೊಳಿಸಿದೆ. ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ, ಪ್ರಸ್ತುತ ಎದುರಾಗಿರುವ ಮಳೆ ಕೊರತೆಯನ್ನು ಪರಿಣಾಮಕಾರಿಯಾಗಿ ಎದುರಿಸಲು ಹಾಗೂ ತೀವ್ರ ನೀರಿನ ಕೊರತೆಯನ್ನು ಮುಂಚಿತವಾಗಿ ತಡೆಯಲು ಮೋಡ ಬಿತ್ತನೆ ಕಾರ್ಯವನ್ನು ಆದ್ಯತೆಯ ಮೇರೆಗೆ ಕೈಗೊಳ್ಳಲು ನಿರ್ಧರಿಸಿದ್ದೇವೆ ಎಂದು ಹೇಳಿದರು.ಯೋಜನೆಗೆ ಸಂಬಂಧಿಸಿದ ಮೂರು ವಿಶೇಷ ಸಮಿತಿಗಳನ್ನು ಗುರುವಾರ ಅಧಿಕೃತವಾಗಿ ರಚಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು. ಮುಂದಿನ ಎರಡು-ಮೂರು ದಿನಗಳಲ್ಲಿ ಸಮಿತಿಗಳು ಆರಂಭಿಕ ತಾಂತ್ರಿಕ ಪರಿಶೀಲನೆ ನಡೆಸಲಿದ್ದು, ಬಳಿಕ ಮೋಡ ಬಿತ್ತನೆ ಕಾರ್ಯಾಚರಣೆ ಹಾಗೂ ಕ್ಷೇತ್ರ ಮಟ್ಟದ ಮೌಲ್ಯಮಾಪನ ಅಧಿಕೃತವಾಗಿ ಆರಂಭವಾಗಲಿದೆ ಎಂದರು.

> ರಾಜ್ಯದ ಕೆಲವು ಭಾಗಗಳಲ್ಲಿ ಅಲ್ಲಲ್ಲಿ ಮಳೆಯಾಗಿದ್ದರೂ, ಹವಾಮಾನ ಮುನ್ಸೂಚನೆಗಳ ಪ್ರಕಾರ ನಿರಂತರವಾಗಿ ಉತ್ತಮ ಮುಂಗಾರು ಮಳೆಯಾಗುವ ಸಾಧ್ಯತೆ ಕಡಿಮೆಯಿದೆ. ಹೀಗಾಗಿ ನೀರಿನ ಬಿಕ್ಕಟ್ಟು ತಪ್ಪಿಸಲು ಕೃತಕ ಮಳೆ ಸುರಿಸುವ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ ಎಂದು ಹೇಳಿದರು.- ಆರ್. ಅಶೋಕ್

### ಕುಡಿಯುವ ನೀರಿನ ಪೂರೈಕೆ ಖಚಿತ

**ಈ ಯೋಜನೆಗೆ ಒಟ್ಟು 27 ಕೋಟಿ ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ. ರಾಜ್ಯದ ಬೊಕ್ಕಸಕ್ಕೆ ಎಷ್ಟೇ ಆರ್ಥಿಕ ಹೊರೆಯಾಗಿದ್ದರೂ, ನಾಗರಿಕರು ಹಾಗೂ ಜಾನುವಾರುಗಳಿಗೆ ನಿರಂತರ ಕುಡಿಯುವ ನೀರಿನ ಪೂರೈಕೆಯನ್ನು ಖಚಿತಪಡಿಸುವುದಕ್ಕೆ ಸರ್ಕಾರ ಆದ್ಯತೆ ನೀಡಲಿದೆ ಎಂದು ಸಚಿವರು ಹೇಳಿದರು.**

# ಅಕ್ರಮ ಅಕ್ಕಿ ದಂಧೆ ವರದಿಮಾಡಿದ ಪತ್ರಕರ್ತನ ಮನೆಗೆ ತೆರಳಿ ಜೀವ ಬೆದರಿಕೆ

## ಆರೋಪಿಗಳ ವಿರುದ್ಧ ಕಠಿಣ ಕ್ರಮಕ್ಕೆ ಆಗ್ರಹಿಸಿ ಚಡಚಣ ಕಾನಿಪ ಸಂಘ ಹಾಗೂ ರೈತ ಸಂಘದಿಂದ ಗೃಹ ಸಚಿವರಿಗೆ ಮನವಿ

• **ಉದಯವಾಹಿನಿ ಚಡಚಣ:**

ವಿಜಯಪುರ ಜಿಲ್ಲೆಯಲ್ಲಿ ಸರ್ಕಾರದ ಅನ್ನಭಾಗ್ಯ ಯೋಜನೆಯ ಅಕ್ಕಿಯ ಕಾಳಸಂತೆ ಹಾಗೂ ಅಕ್ರಮ ದಂಧೆ ಕುರಿತು ವರದಿ ಪ್ರಕಟಿಸಿದ ಹೊಸದಿಗಂತ ಪತ್ರಿಕೆಯ ಜಿಲ್ಲಾ ವರದಿಗಾರ ಪರಶುರಾಮ ಶಿವಶರಣ ಅವರ ಮನೆಗೆ ತೆರಳಿ ಕೆಲವರು ಜೀವ

**1 : ಹಸಿರು ಸೇನೆ ವತಿಯಿಂದ ಶುಕ್ರವಾರ ಮನವಿ**
**2 : ಅನ್ನಭಾಗ್ಯ ಯೋಜನೆಯ ಅಕ್ಕಿಯ ಅಕ್ರಮ ದಂಧೆ**
**3 : ಕುಟುಂಬಸ್ಥರಲ್ಲಿ ಭಯದ ವಾತಾವರಣ ಸೃಷ್ಟಿ**

ಬೆದರಿಕೆ ಹಾಕಿದ್ದಾರೆ ಎನ್ನಲಾಗಿದ್ದು, ಆರೋಪಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಂಡು ಪತ್ರಕರ್ತರಿಗೆ ಸೂಕ್ತ ರಕ್ಷಣೆ ನೀಡುವಂತೆ ಆಗ್ರಹಿಸಿ ಚಡಚಣ ತಹಶೀಲ್ದಾರ್ ಮೂಲಕ ಗೃಹ ಸಚಿವರಿಗೆ ಕರ್ನಾಟಕ ಕಾನಿಪ ಸಂಘ (ಚಡಚಣ) ಹಾಗೂ ಚಡಚಣ ತಾಲ್ಲೂಕ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ವತಿಯಿಂದ ಶುಕ್ರವಾರ ಮನವಿ ಸಲ್ಲಿಸಲಾಯಿತು. ಮನವಿ ಸ್ವೀಕರಿಸಿ ಮಾತನಾಡಿದ ತಹಶೀಲ್ದಾರರ ಪರವಾಗಿ ರವಿಕುಮಾರ ಎಸ್.ಚವ್ಹಾಣ ಅವರು ಶೀಘ್ರದಲ್ಲಿಯೆ ಕ್ರಮಕ್ಕೆಗೊಳ್ಳುವದಾಗಿ ಹೇಳಿದರು.

ಪತ್ರಕರ್ತರ ಸುರಕ್ಷತೆ ಹಾಗೂ ವೃತ್ತಿ ಸ್ವಾತಂತ್ರ್ಯವನ್ನು ಕಾಪಾಡುವುದು ಸರ್ಕಾರ ಮತ್ತು ಪೊಲೀಸ್ ಇಲಾಖೆಯ


ಉದಯವಾಹಿನಿ ಚಿತ್ರ

ಜವಾಬ್ದಾರಿಯಾಗಿದ್ದು ಕೂಡಲೆ ಈ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಆರೋಪಿಗಳನ್ನು ತಕ್ಷಣ ಪತ್ತೆಹಚ್ಚಿ ಅವರನ್ನು ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಮತ್ತು ಜಿಲ್ಲೆಯಲ್ಲಿಯೆ ಅಲ್ಲ ಕರ್ನಾಟಕದಲ್ಲಿ ಇಂಥಹ ಪ್ರಕರಣಗಳು ಮರುಕಳಿಸದಂತೆ ಸರ್ಕಾರ ಮತ್ತು ಪೋಲಿಸ್ ಇಲಾಖೆ ಕಠಿಣ ಕಾನೂನು ಜಾರಿಗೊಳಿಸು ಎಂದರು.

ಅಲ್ಲದೆ, ಪತ್ರಕರ್ತರು ಯಾವುದೇ ಭಯ, ಒತ್ತಡ ಅಥವಾ ಬೆದರಿಕೆಯಿಲ್ಲದೆ ತಮ್ಮ ವೃತ್ತಿಪರ ಕರ್ತವ್ಯ ನಿರ್ವಹಿಸಲು ಅಗತ್ಯ ಭದ್ರತೆ ಒದಗಿಸಬೇಕು. ಪತ್ರಕರ್ತರಿಗೆ ಬೆದರಿಕೆ ಹಾಕುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು ಇಂತಹ ಘಟನೆಗಳು ಮರು ಕಳಿಸದಂತೆ ಪೊಲೀಸ್ ಇಲಾಖೆ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

> ಅನ್ನಭಾಗ್ಯ ಯೋಜನೆಯ ಅಕ್ಕಿಯ ಅಕ್ರಮ ದಂಧೆ ಕುರಿತು ಪರಶುರಾಮ ಶಿವಶರಣ ಅವರು ಜವಾಬ್ದಾರಿಯುತವಾಗಿ ತನಿಖಾ ವರದಿ ಪ್ರಕಟಿಸಿದ್ದು ಇದರಿಂದ ಅಕ್ರಮದಲ್ಲಿ ಭಾಗಿಯಾದ ಕೆಲವರು ಪತ್ರಕರ್ತರ ಮನೆಗೆ ತೆರಳಿ ಅಕ್ರಮವಾಗಿ ಪ್ರವೇಶಿಸಿ, ಸಮಾಜ ಹಾಗೂ ಕುಟುಂಬಸ್ಥರಲ್ಲಿ ಭಯದ ವಾತಾವರಣ ಸೃಷ್ಟಿಸಿ ಜೀವ ಬೆದರಿಕೆ ಹಾಕಿದ್ದು ಅಕ್ಷಮ್ಯ ಅಪರಾಧವಾಗಿದ್ದು ಸಮಾಜಘಾತುಕರನ್ನು ಕೂಡಲೆ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದರು.
> – ಪ್ರಧಾನ ಕಾರ್ಯದರ್ಶಿ ರಾಜಶೇಖರ ಡೋಣಜಮಠ

ಈ ಸಂದರ್ಭದಲ್ಲಿ ಚಡಚಣ ತಾಲ್ಲೂಕ ಕರ್ನಾಟಕ ರಾಜ್ಯ ರೈತ ಸಂಘ

> ಸಮಾಜದಲ್ಲಿನ ಅಕ್ರಮ, ಭ್ರಷ್ಟಾಚಾರ ಹಾಗೂ ಸಾರ್ವಜನಿಕ ಹಿತಾಸಕ್ತಿಗೆ ಸಂಬಂಧಿಸಿದ ವಿಷಯಗಳನ್ನು ಜನರ ಮುಂದಿಡುವುದು ಪತ್ರಕರ್ತರ ವೃತ್ತಿಪರ ಕರ್ತವ್ಯವಾಗಿದೆ. ಇಂತಹ ಕರ್ತವ್ಯ ನಿರ್ವಹಿಸಿದ್ದಕ್ಕಾಗಿ ಪತ್ರಕರ್ತರ ಮನೆಗೆ ತೆರಳಿ ಬೆದರಿಕೆ ಹಾಕುವುದು ಪತ್ರಿಕಾ ಸ್ವಾತಂತ್ರ್ಯ ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾದ ಕೃತ್ಯವಾಗಿದೆ, ಪತ್ರಕರ್ತರನ್ನು ಬೆದರಿಕೆ ಹಾಗೂ ಒತ್ತಡದ ಮೂಲಕ ಮೌನಗೊಳಿಸುವ ಪ್ರಯತ್ನಗಳಿಗೆ ಅವಕಾಶ ನೀಡಬಾರದು.
> – ರೈತ ಸಂಘದ ತಾಲ್ಲೂಕು ಅಧ್ಯಕ್ಷ ವಸಂತ ಭೈರಾಮಡಿ,

ಹಾಗೂ ಹಸಿರು ಸೇನೆಯ ಅಧ್ಯಕ್ಷ ವಸಂತ ಭೈರಾಮಡಿ, ಚಡಚಣ ಕಾನಿಪ ಸಂಘದ ಅಧ್ಯಕ್ಷ ರಮೇಶ ಬಿರಾದಾರ, ಚಡಚಣ ಕಾನಿಪ ಸಂಘದ ಮಾಜಿಅಧ್ಯಕ್ಷ ಪ್ರಭಾಕರ ಗೂಳಿಪಾಟೀಲ, ಪ್ರ.ಕಾರ್ಯದರ್ಶಿ ರಾಜಶೇಖರ ಡೋಣಜಮಠ, ಖಜಾಂಚಿ ವಿನಯ ಜೀರಂಕಲಗಿ, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಶಿವಾನಂದ ಶಿವಶರಣ, ಉಪಾಧ್ಯಕ್ಷ ಸಂಗಮೇಶ ಹೆಚ್ ಹೂಗಾರ, ಶಂಕರ ಹಾವಿನಾಳ, ಸುಬ್ರಹ್ಮಣ್ಯ ಸಂಗಮ, ಶ್ರೀಕಾಂತ ಬಗಲಿ, ಗಂಗಾಧರ ಗಿಡವೀರ, ಪುಟ್ಟು ನೀವರಗಿ, ಚಂದ್ರಕಾಂತ ನೀವರಗಿ, ಲಾಲಸಾಬ ನದಾಫ, ಪತ್ರಕರ್ತರು ಇದ್ದರು.

# ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ಒಬ್ಬ ಸಂತನಿಂದ ಆಧ್ಯಾತ್ಮಿಕ ಜ್ಞಾನ ಸಾಂತ್ವನ ಮತ್ತು ಆರಾಮವನ್ನು ಒದಗಿಸುತ್ತದೆ. ಇತರರ ಮೇಲೆ ಪ್ರಭಾವ ಬೀರಲು ತುಂಬಾ ವೆಚ್ಚ ಮಾಡಬೇಡಿ. ನಿಮ್ಮ ಹಠಮಾರಿ ಪ್ರಕೃತಿ ನಿಮ್ಮ ಪೋಷಕರ ಶಾಂತಿಯನ್ನು ಹಾಳು ಮಾಡಬಹುದು. ನೀವು ಅವರ ಸಲಹೆಯನ್ನು ಪಾಲಿಸಬೇಕು.

**ವೃಷಭ** ಆರೋಗ್ಯ ಚೆನ್ನಾಗಿರುತ್ತದೆ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ಮನೆಯಲ್ಲಿನ ಹಬ್ಬದ ವಾತಾವರಣ ನಿಮ್ಮ ಉದ್ವೇಗವನ್ನು ಶಮನಗೊಳಿಸುತ್ತದೆ. ನೀವು ಇದರಲ್ಲಿ ಭಾಗವಹಿಸುತ್ತೀರಿ ಮತ್ತು ಕೇವಲ ಮೂಕ ಪ್ರೇಕ್ಷಕರಾಗಿ ಮಾತ್ರ ಉಳಿಯುವುದಿಲ್ಲವೆಂದು ಖಚಿತಪಡಿಸಿಕೊಳ್ಳಿ.

**ಮಿಥುನ** ನೀವು ವಿಶ್ರಾಂತಿ ಪಡೆಯಲು ಸಾಧ್ಯವಾಗುವ ಒಂದು ದಿನ. ನಿಮ್ಮ ಸ್ನಾಯುಗಳಿಗೆ ವಿಶ್ರಾಂತಿ ನೀಡಲು ತೈಲದಿಂದ ನಿಮ್ಮ ದೇಹಕ್ಕೆ ಮಸಾಜ್ ಮಾಡಿ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ.

**ಕಟಕ** ಸ್ನೇಹಿತರ ಮೂಲಕ ದೊರಕುವ ಜ್ಯೋತಿಶ್ಯಾಸ್ತ್ರದ ಮಾರ್ಗದರ್ಶನ ನಿಮ್ಮ ಆರೋಗ್ಯವನ್ನು ಸುಧಾರಿಸಲು ನಿಮ್ಮನ್ನು ಉತ್ತೇಜಿಸುತ್ತದೆ. ವಿಳಂಬಿತ ಪಾವತಿಗಳನ್ನು ಮಾಡುತ್ತಿದ್ದ ಹಾಗೆ ಹಣದ ಪರಿಸ್ಥಿತಿ ಸುಧಾರಿಸುತ್ತದೆ. ನಿಮ್ಮ ಸಹೋದರನಿಗೆ ವಿಷಯಗಳನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಸಹಾಯ ಮಾಡಿ.

**ಸಿಂಹ** ಅತಿಯಾಗಿ ತಿನ್ನುವುದನ್ನು ತಪ್ಪಿಸಿ ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ. ಪ್ರೀತಿ ಸಾಂಗತ್ಯ ಬಂಧ ಐರಿಕೆಯಲ್ಲಿರುತ್ತವೆ. ಒಬ್ಬ ಆಸಕ್ತಿದಾಯಕ ವ್ಯಕ್ತಿಯನ್ನು ಭೇಟಿ ಮಾಡುವ ಸಾಧ್ಯತೆಗಳಿವೆ.

**ಕನ್ಯಾ** ನಿಮ್ಮ ತೂಕದ ಮೇಲೆ ಒಂದು ಕಣ್ಣಿಟ್ಟಿರಿ ಮತ್ತು ಅತಿಯಾಗಿ ತಿನ್ನಬೇಡಿ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ನಿಮ್ಮಲ್ಲಿ ಕೆಲವು ಆಭರಣ ಗೃಹಬಳಕೆಯ ಸಾಧನಗಳನ್ನು ಖರೀದಿಸುವ ಸಾಧ್ಯತೆಗಳಿವೆ. ಒಮ್ಮೆ ನಿಮ್ಮ ಜೀವನಸಂಗಾತಿಯನ್ನು ನೀವು ಭೇಟಿಯಾದ ಮೇಲೆ, ಬೇರೇನೂ ಬೇಕಾಗಿರುವುದಿಲ್ಲ.

**ತುಲಾ** ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ನಿಮ್ಮ ವೆಚ್ಚಗಳನ್ನು ನಿಯಂತ್ರಿಸಲು ಪ್ರಯತ್ನಿಸಿ ತುಂಬಾ ಖರ್ಚು ಮಾಡಬೇಡಿ. ಸಂಬಂಧಿಗಳು ಸ್ನೇಹಿತರು ಒಂದು ಅದ್ಭುತ ಸಂಜೆಗಾಗಿ ಬರುತ್ತಾರೆ. ಏಕಪಕ್ಷೀಯ ವ್ಯಾಮೋಹ ನಿಮಗೆ ಕೇವಲ ಎದೆಗುದಿ ತರುತ್ತದೆ.

**ವೃಶ್ಚಿಕ** ಒಂದು ಲಾಭಕರ ದಿನ ನೀವು ದೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ನಿಮ್ಮ ಸಮರ್ಪಣೆ ಶ್ರಮವನ್ನು ಗಮನಿಸಲಾಗುತ್ತದೆ ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ. ಅಂಚೆಯ ಮೂಲಕ ಬರುವ ಒಂದು ಪ್ರಮುಖ ಸಂದೇಶ ಇಡೀ ಕುಟುಂಬಕ್ಕೆ ಸಂತೋಷ ತರುತ್ತದೆ.

**ಧನಸ್ಸು** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ ಆದರೆ ಹಿಂದಿನ ದಿನಗಳಲ್ಲಿ ಮಾಡಲಾಗಿರುವ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ, ಸಣ್ಣ ಮಕ್ಕಳು ನಿಮ್ಮನ್ನು ವ್ಯಸ್ತವಾಗಿರಿಸುತ್ತಾರೆ.

**ಮಕರ** ನೀವು ದೀರ್ಘಕಾಲೀನ ಅನಾರೋಗ್ಯದ ಚೇತರಿಸಿಕೊಳ್ಳುತ್ತೀರಿ. ಆದರೆ ಸ್ವಾರ್ಥಿಗಳಾದ, ಮುಂಗೋಪಿ ವ್ಯಕ್ತಿಯ ಸಹವಾಸವನ್ನು ತಪ್ಪಿಸಿ – ಅವರು ನಿಮ್ಮ ಮೇಲೆ ಒತ್ತಡ ಹಾಕಬಹುದು–ಇದು ಸಮಸ್ಯೆಯನ್ನು ಮತ್ತಷ್ಟು ಉಲ್ಬಣಗೊಳಿಸಬಹುದು. ಬಹಳ ಪ್ರಯೋಜನಕಾರಿ ದಿನವಲ್ಲ– ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶೀಲಿಸಿ.

**ಕುಂಭ** ಪ್ರೀತಿಯ ಸಂಕಟವನ್ನು ಎದುರಿಸುವ ಸಾಧ್ಯತೆಗಳು ಇಂದು ಹೆಚ್ಚಿವೆ. ಸಮಯದ ಸೌಂದರ್ಯವನ್ನು ಅರ್ಥಮಾಡಿಕೊಳ್ಳುತ್ತ, ಇಂದು ನೀವು ಎಲ್ಲಾ ಜನರಿಂದ ದೂರವಾಗಿ ಏಕಾಂತದಲ್ಲಿ ಸಮಯವನ್ನು ಕಳೆಯಲು ಇಷ್ಟಪಡುವಿರಿ. ಅದನ್ನು ಮಾಡುವುದು ನಿಮಗೆ ಉತ್ತಮವಾಗಲಿದೆ.

**ಮೀನ** ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ನಿಮ್ಮ ಸೃಜನಶೀಲ ಪ್ರತಿಭೆಯನ್ನು ಸರಿಯಾಗಿ ಬಳಸಿದಲ್ಲಿ ಅದು ಅತ್ಯಂತ ಲಾಭದಾಯಕವೆಂದು ಸಾಬೀತಾಗಬಹುದು. ಮೋಂಬತ್ತಿಯ ಬೆಳಕಿನಲ್ಲಿ ನಿಮ್ಮ ಕುಟುಂಬದೊಂದಿಗೆ ಭೋಜನ ಮಾಡಿ ಹಾಗೂ ರಾತ್ರಿಯನ್ನು ಆನಂದಿಸಿ.

# ಕ್ರೀಡಾ ಚಟುವಟಿಕೆಗೆ ಸಮಯ ಮೀಸಲಿಡಬೇಕು: ಬಟ್ಟು ಸತ್ಯನಾರಾಯಣ

• **ಉದಯವಾಹಿನಿ ಕಲಬುರಗಿ,:**

ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಅಂಗವಾಗಿ ಕೇಂದ್ರ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ಮೈ ಭಾರತ್ ವತಿಯಿಂದ ಆಯೋಜಿಸಲಾಗಿದ್ದ ''ಖೇಲೋ ಇಂಡಿಯಾ ಸಂವಾದ್ ಖೇಲ್ ಕಿ ಬಾತ್, ಪಿಎಂ ಮೋದಿ ಕೆ ಸಾಥ್'' ಕಾರ್ಯಕ್ರಮದಲ್ಲಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ (ಸಿಯುಕೆ) ವರ್ಚುವಲ್ ಮುಖಾಂತರ ಭಾಗವಹಿಸಿತು.

ಈ ಸಂದರ್ಭದಲ್ಲಿ ಮಾತನಾಡಿದ ಕುಲಪತಿಗಳಾದ ಪ್ರೊ. ಬಟ್ಟು ಸತ್ಯನಾರಾಯಣ ಅವರು ವಿದ್ಯಾರ್ಥಿಗಳು ತಮ್ಮ ದೈನಂದಿನ ಶೈಕ್ಷಣಿಕ ಚಟುವಟಿಕೆಗಳ ಜೊತೆಗೆ ಕಡ್ಡಾಯವಾಗಿ ಯಾವುದಾದರೊಂದು ಕ್ರೀಡೆಯಲ್ಲಿ ಭಾಗವಹಿಸಬೇಕು ಹಾಗೂ ಪ್ರತಿದಿನ ದೈಹಿಕ ಚಟುವಟಿಕೆಗಾಗಿ ಸಮಯವನ್ನು ಮೀಸಲಿಡಬೇಕು ಎಂದು ಕರೆ ನೀಡಿದರು. ಕ್ರೀಡೆ ಮತ್ತು ವ್ಯಾಯಾಮವು ಉತ್ತಮ ಆರೋಗ್ಯವನ್ನು ಕಾಪಾಡುವುದರ ಜೊತೆಗೆ ಏಕಾಗ್ರತೆ, ಆತ್ಮವಿಶ್ವಾಸ ಮತ್ತು ಮಾನಸಿಕ ಸದೃಢತೆಯನ್ನು ಹೆಚ್ಚಿಸುತ್ತದೆ. ಇದರಿಂದ ಶೈಕ್ಷಣಿಕ ಚಟುವಟಿಕೆಗಳಲ್ಲಿಯೂ ಇನ್ನಷ್ಟು ಸಕ್ರಿಯವಾಗಿ ತೊಡಗಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದರು. ವಿ.ವಿ.ಯಲ್ಲಿ ಲಭ್ಯವಿರುವ ಸುಸಜ್ಜಿತ ಒಳಾಂಗಣ ಮತ್ತು ಹೊರಾಂಗಣ ಕ್ರೀಡಾಂಗಣಗಳು, ಜಿಮ್‌ಗಳ ಸೌಲಭ್ಯ ಹಾಗೂ ನುರಿತ ತರಬೇತುದಾರರ ಸೇವೆಗಳನ್ನು ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಂಡು ತಮ್ಮ ಆರೋಗ್ಯ ವೃದ್ಧಿ ಮತ್ತು ದೈಹಿಕ



ಉದಯವಾಹಿನಿ ಚಿತ್ರ

> ಕಾನೂನು ಅಧ್ಯಯನ ಮತ್ತು ವಿದ್ಯಾರ್ಥಿ ಕಲ್ಯಾಣದ ಡೀನ್ ಪ್ರೊ.ಬಸವರಾಜ ಎಂ ಕುಬಕಡ್ಡಿ ಅವರು ಮಾತನಾಡಿ ಆರೋಗ್ಯವೇ ಭಾಗ್ಯವಾಗಿದ್ದು, ವಿದ್ಯಾರ್ಥಿಗಳು ಶೈಕ್ಷಣಿಕ ಚಟುವಟಿಕೆಯ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿಯೂ ಸಹ ಸಕ್ರೀಯವಾಗಿ ಭಾಗವಹಿಸಬೇಕೆಂದು ಹೇಳಿದರು.

ಸದೃಡತೆಯನ್ನು ಕಾಪಾಡಿಕೊಳ್ಳಬೇಕೆಂದು ಅವರು ಸಲಹೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಅವರು ದೇಶದ ಯುವಜನರನ್ನು ಉದ್ದೇಶಿಸಿ ನೀಡಿದ ಸ್ಫೂರ್ತಿದಾಯಕ ಸಂದೇಶವು ಯುವ ಸಮುದಾಯ ಫಿಟ್ ಇಂಡಿಯಾ ಮನೋಭಾವವನ್ನು ಅಳವಡಿಸಿಕೊಳ್ಳಲು ಮತ್ತು ವಿಕಸಿತ ಭಾರತ-2047 ರ ನಿರ್ಮಾಣದ ನಮ್ಮೆಲ್ಲರ ರಾಷ್ಟ್ರೀಯ ಸಂಕಲ್ಪಕ್ಕೆ ಪ್ರತಿಯೊಬ್ಬ ಯುವಕ-ಯುವತಿಯೂ ತಮ್ಮದೇ ಆದ ಕೊಡುಗೆ ನೀಡಲು ಮತ್ತಷ್ಟು ಪ್ರೇರಣೆ ನೀಡುತ್ತದೆ ಎಂದು ಕುಲಪತಿಗಳು ಹೇಳಿದರು.

# ಬಿಜೆಪಿ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರ ಪ್ರತಿಭಟನೆ

• **ಉದಯವಾಹಿನಿ ಹೊಸಪೇಟೆ.**

ಬಿಜೆಪಿ ವಿರುದ್ಧ ನಗರದಲ್ಲಿ ಪ್ರತಿಭಟನೆ ನಡೆಸಿದ ಕಾಂಗ್ರೆಸ್ ಕಾರ್ಯಕರ್ತರು, ವಾಲ್ಮೀಕಿ ಹಗರಣದ ನೆಪ ಮಾಡಿಕೊಂಡು ಸಚಿವ ಬಿ.ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸುತ್ತಿರುವ ಬಿಜೆಪಿ ಮುಖಂಡರ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ನಗರದ ಗಾಂಧಿ ವೃತ್ತದಿಂದ ಪ್ರತಿಭಟನಾ ಮೆರವಣಿಗೆ ಮೂಲಕ ಆಗಮಿಸಿದ ಕಾರ್ಯಕರ್ತರು ಡಾ.ಪುನೀತ್ ರಾಜ್ ಕುಮಾರ್ ವೃತ್ತದಲ್ಲಿ ಬಿಜೆಪಿ ವಿರುದ್ಧ ಬೃಹತ್ ಪ್ರತಿಭಟನೆ ನಡೆಸುವ ಮೂಲಕ ತಮ್ಮ ಆಕ್ರೋಶ ಹೊರ ಹಾಕಿದರು.

ಪ್ರತಿಭಟನಾಕಾರರನ್ನುದ್ದೇಶಿ ಮಾತನಾಡಿದ ಕಾಂಗ್ರೆಸ್ ಕಾರ್ಮಿಕ ಘಟಕದ ಜಿಲ್ಲಾಧ್ಯಕ್ಷ ಡಿ.ವೆಂಕಟರಮಣ, ಸ್ಥಳೀಯ ಬಿಜೆಪಿ ಮುಖಂಡರಿಗೆ ಈ ಭಾಗದಲ್ಲಿ ಎಸ್.ಟಿ ಸಮುದಾಯದ ಸಚಿವ ಬಿ,ನಾಗೇಂದ್ರ ಪ್ರಬಲವಾಗಿ ಬೆಳೆದರೆ, ತಾವು ಮಾಡಿರುವ ಅವ್ಯವಹಾರಗಳು ಎಲ್ಲಿ ಬಯಲಿಗೆ ಬರುತ್ತವೆ ಎಂಬ ಭಯವಿದೆ. ಹಾಗಾಗಿ ಅವರು ರಾಜೀನಾಮೆಗೆ ಒತ್ತಾಯಿಸುತ್ತಿದ್ದಾರೆ.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಳ್ಳಾರಿ ಬಿಜೆಪಿ ಮುಖಂಡರಾದ ಜಿ.ಜನಾರ್ಧನರೆಡ್ಡಿ, ಬಿ.ಶ್ರೀರಾಮುಲು ಹಾಗೂ ಜಿ.ಸೋಮಶೇಖರ ರೆಡ್ಡಿ, ಮಾಡಿರುವ ಅವ್ಯವಹಾರಗಳು ಇಡೀ ಜಗತ್ತಿಗೆ ಗೊತ್ತಿದೆ. ರಿಪಬ್ಲಿಕ್ ಬಳ್ಳಾರಿ ಮಾಡಿದ್ದ ಬಿಜೆಪಿ



ಉದಯವಾಹಿನಿ ಚಿತ್ರ

ಮುಖಂಡರುಗಳಿಗೆ ನಾಗೇಂದ್ರ, ಸಚಿವನಾಗಿರುವುದರಿಂದ ಸಹಿಸಲು ಆಗುತ್ತಿಲ್ಲ.

ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಜನಾರ್ಧನರೆಡ್ಡಿ, ಬಿ.ಶ್ರೀರಾಮುಲು, ಸೋಮಶೇಖರ ರೆಡ್ಡಿ ಸೇರಿದಂತೆ ಹಲವು ಬಿಜೆಪಿ ಮುಖಂಡರು ಭ್ರಷ್ಟಾಚಾರ ಮಾಡಿದ್ದಾರೆ. ಅವರ ಮೇಲು ಹಲವು ಗಣಿ ಹಗರಣದ ಪ್ರಕರಣಗಳು ದಾಖಲಾಗಿವೆ. ಈ ಹಿನ್ನಲೆಯಲ್ಲಿ ಬಿಜೆಪಿ ಯವರಿಗೆ ಸಚಿವ ನಾಗೇಂದ್ರ ಅವರ ರಾಜೀನಾಮೆ ಕೇಳುವ ಯಾವುದೇ ನೈತಿಕ ಹಕ್ಕಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

# ಎಲ್ಲಾ ದಾರ್ಶನಿಕರ ಜಯಂತಿ ಒಗ್ಗೂಡಿಸುವುದರಿಂದ ಸಮಾಜದಲ್ಲಿ ಸಮಾನತೆ, ಏಕತೆ ಸಾಧ್ಯ

• **ಉದಯವಾಹಿನಿ ಮುದ್ದೇಬಿಹಾಳ:**

ಎಲ್ಲಾ ಸಮಾಜಗಳ ಗುರುಗಳು ಹಾಗೂ ದಾರ್ಶನಿಕರ ಜಯಂತಿಗಳನ್ನು ಒಗ್ಗೂಡಿಸಿ ಆಚರಿಸಿದಾಗ ಮಾತ್ರ ಸಮಾಜದಲ್ಲಿ ಸಮಾನತೆ ಮತ್ತು ಏಕತೆ ಮೂಡಲು ಸಾಧ್ಯ ಎಂದು ಶಾಸಕ ಸಿ.ಎಸ್. ನಾಡಗೌಡ (ಅಪ್ಪಾಜೀ) ಅಭಿಪ್ರಾಯಪಟ್ಟರು. ಸ್ಥಳೀಯ ತಾಲ್ಲೂಕು ಆಡಳಿತದ ವತಿಯಿಂದ ಶುಕ್ರವಾರ ಆಡಳಿತ ಸೌಧದ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಹರ್ಷಿ ನಾರಾಯಣ ಗುರುಗಳ ಜಯಂತ್ಯುತ್ಸವ ಹಾಗೂ ನುಲಿ ಚಂದಯ್ಯ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಪಟ್ಟಣದ ಶ್ರೀ ನಾರಾಯಣ ಗುರು ವೃತ್ತ ಹಾಗೂ ನುಲಿ ಚಂದಯ್ಯ ವೃತ್ತದಲ್ಲಿ ಗಣ್ಯರು ವಿಶೇಷ ಪೂಜೆ ಸಲ್ಲಿಸಿ ಗೌರವ ಸಲ್ಲಿಸಿದರು. ನಂತರ ಸಭಾ ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದು ಸಾಧನೆಗೈದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಆನಂದ ಕೋಲಾರ ಮಾತನಾಡಿ, ಒಂದೇ ದೇವರು, ಒಂದು ಧರ್ಮ, ಎಲ್ಲಾ ಮಾನವರಿಗೆ ಒಂದೇ ದೇವರು ಎಂಬ ಮಾನವೀಯ ಧ್ಯೇಯ ಹೊಂದಿದ್ದ ಮಹರ್ಷಿ ನಾರಾಯಣ ಗುರುಗಳು ತತ್ವಜ್ಞಾನಿ, ಆಧ್ಯಾತ್ಮಿಕ ಚಿಂತಕ ಹಾಗೂ ಶಿಕ್ಷಣ ಪ್ರೇಮಿಯಾಗಿದ್ದರು. ಹಾಗೆಯೇ 12ನೇ ಶತಮಾನದ ದಾರ್ಶನಿಕರಾದ ನುಲಿ ಚಂದಯ್ಯನವರು ಬಸವಾದಿ ಶರಣರ ಸಮೂಹದ ವಚನಕಾರರಾಗಿದ್ದು, ತಮ್ಮ ವಚನಗಳ ಮೂಲಕ ಸಮಾಜ ಸುಧಾರಣೆಗೆ ಅತ್ಯುನ್ನತ ಕೊಡುಗೆ ನೀಡಿದ್ದಾರೆ ಎಂದರು.

ವೈ.ಹೆಚ್. ವಿಜಯಕರ ಮಾತನಾಡಿ, ತುಳಿತಕ್ಕೆ ಒಳಗಾದ ಶೋಷಿತರು, ದೀನದಲಿತರ ಉದ್ಧಾರಕ್ಕಾಗಿ ಶ್ರಮಿಸುತ್ತಾ ಜಾತೀಯತೆ ಮತ್ತು ಅಸ್ಪೃಶ್ಯತೆ ನಿರ್ಮೂಲನೆಗೆ ಕಟಿಬದ್ಧರಾಗಿದ್ದ ಬ್ರಹ್ಮಶ್ರೀ ನಾರಾಯಣ ಗುರುಗಳು ಮಹಾನ್ ಮಾನವತಾವಾದಿ ಹಾಗೂ ಸಾಮಾಜಿಕ ಪರಿವರ್ತನೆಯ ಹರಿಕಾರರಾಗಿದ್ದಾರೆ ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಶಿಕ್ಷಕ ಟಿ.ಡಿ. ಲಮಾಣಿ, ನಾರಾಯಣ ಗುರುಗಳ ಕಾಲಘಟ್ಟದಲ್ಲಿ ತಳಸಮುದಾಯಗಳ ಕರಾಳತೆಗೆ ಮೂಢನಂಬಿಕೆ ಮತ್ತು ಅನಗತ್ಯ ಆಡಂಬರದ ಆಚರಣೆಗಳೇ ಕಾರಣವಾಗಿದ್ದವು.

ಇದನ್ನು ಮನಗಂಡ ಗುರುಗಳು ದೇವದಾಸಿ ಪದ್ಧತಿ, ಬಾಲ್ಯವಿವಾಹದಂತಹ ಅನಿಷ್ಟ ಪದ್ಧತಿಗಳನ್ನು ಕಠಿಣವಾಗಿ ವಿರೋಧಿಸಿ, ದುಂದುವೆಚ್ಚಕ್ಕೆ ಕಡಿವಾಣ ಹಾಕಿ ಸರಳ ವಿವಾಹ ನೀತಿಗೆ ಒತ್ತು ನೀಡಿದರು ಎಂದು ವಿವರವಾಗಿ ತಿಳಿಸಿದರು.


ಉದಯವಾಹಿನಿ ಚಿತ್ರ

ಕಾರ್ಯಕ್ರಮದಲ್ಲಿ ಹಿಂದೂ ಈಡಿಗ ಸಮಾಜದ ಅಧ್ಯಕ್ಷ ಗಣೇಶ ಅನ್ನಗೌನಿ, ಭಜಂತ್ರಿ ಸಮಾಜದ ಅಧ್ಯಕ್ಷ ನಾಗೇಶ ಭಜಂತ್ರಿ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಕಾಮರಾಜ ಬಿರಾದಾರ, ಮುಖಂಡರಾದ ಸಂಗನೌಡ ಬಿರಾದಾರ, ಸಿಕಂದರ್ ಜಾನ್ವೇಕರ, ರಾಜೇಂದ್ರಗೌಡ ರಾಯಗೊಂಡ, ಉದಯಸಿಂಗ್ ರಾಯಚೂರು, ಪ್ರಭುದೇವ ಕಲಬುರಗಿ, ಗುರು ತಾರನಾಳ, ಪರಶುರಾಮ ನಾಲತವಾಡ, ಸಿ.ಜಿ. ವಿಜಯಕರ ಸೇರಿದಂತೆ ವಿವಿಧ ಸಮಾಜಗಳ ಮುಖಂಡರು, ಪ್ರಮುಖರು ಹಾಗೂ ನೂರಾರು ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.

# ಅಂಬೇಡ್ಕರ್ ಭವನ ನಿರ್ಮಾಣ ಕಾಮಗಾರಿ ಪರಿಶೀಲಿಸಿದ ಶಾಸಕ ಚವ್ಹಾಣ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಔರಾದ್ :**

ಪಟ್ಟಣದಲ್ಲಿ ಉತ್ತಮ ವಿನ್ಯಾಸ ಹೊಂದಿರುವ ಭವ್ಯವಾದ ಡಾ. ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಗೊಳ್ಳುತ್ತಿದ್ದು, ಕಾಮಗಾರಿ ಸ್ಥಳಕ್ಕೆ ಶಾಸಕ ಪ್ರಭು ಬಿ. ಚವ್ಹಾಣ ಅವರು ಭೇಟಿ ನೀಡಿ ಕಾಮಗಾರಿಯನ್ನು ಪರಿಶೀಲಿಸಿದರು.

ಈ ವೇಳೆ ಕಾಮಗಾರಿಯ ಪ್ರಗತಿ, ಕಟ್ಟಡದ ವಿನ್ಯಾಸ, ಬಳಸಲಾಗುತ್ತಿರುವ ನಿರ್ಮಾಣ ಸಾಮಗ್ರಿಗಳ ಗುಣಮಟ್ಟ ಹಾಗೂ ಕೈಗೊಳ್ಳಲಾಗುತ್ತಿರುವ ನಿರ್ಮಾಣ ಕಾರ್ಯದ ವಿವಿಧ ಹಂತಗಳನ್ನು ವೀಕ್ಷಿಸಿದ ಅವರು, ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಂದ ಕಾಮಗಾರಿಯ ಪ್ರಸ್ತುತ ಹಂತದ ಕುರಿತು ಮಾಹಿತಿ ಪಡೆದರು.

ಔರಾದ ಪಟ್ಟಣದ ಜನತೆಗೆ ಬಹುದಿನಗಳಿಂದ ಅಗತ್ಯವಿದ್ದ ಈ ಭವನವು ಉತ್ತಮ ವಿನ್ಯಾಸ, ವಿಶಾಲ ಸ್ಥಳಾವಕಾಶ ಹಾಗೂ ಅಗತ್ಯ ಸೌಲಭ್ಯಗಳನ್ನು ಹೊಂದಿರುವ ಭವ್ಯ ಕಟ್ಟಡವಾಗಿ ನಿರ್ಮಾಣಗೊಳ್ಳುತ್ತಿದೆ. ಸಾರ್ವಜನಿಕರು ಹಾಗೂ ವಿವಿಧ ಸಂಘ-ಸಂಸ್ಥೆಗಳು ಸಾಮಾಜಿಕ, ಶೈಕ್ಷಣಿಕ, ಸಾಂಸ್ಕೃತಿಕ ಮತ್ತು ಸಮುದಾಯ ಕಾರ್ಯಕ್ರಮಗಳನ್ನು ಆಯೋಜಿಸಲು ಇದು ಪ್ರಮುಖ ಕೇಂದ್ರವಾಗಲಿದೆ ಎಂದು ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಸಮಾನತೆ, ಸಾಮಾಜಿಕ ನ್ಯಾಯ, ಸ್ವಾತಂತ್ರ್ಯ ಹಾಗೂ ಸಂವಿಧಾನಾತ್ಮಕ ಮೌಲ್ಯಗಳಿಗಾಗಿ ಹೋರಾಡಿದ ಮಹಾನ್ ನಾಯಕರಾಗಿದ್ದಾರೆ. ಅವರ ವಿಚಾರಧಾರೆ ಹಾಗೂ ಆದರ್ಶಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ಅಂಬೇಡ್ಕರ್ ಭವನಗಳು ಮಹತ್ವದ ಪಾತ್ರ ವಹಿಸುತ್ತವೆ.

ಸಮಾಜ ಬಾಂಧವರು ಒಂದೆಡೆ ಸೇರಿ ವಿವಿಧ ಕಾರ್ಯಕ್ರಮಗಳನ್ನು ನಡೆಸಲು ಇಂತಹ ಭವನಗಳು ಉತ್ತಮ ವೇದಿಕೆಯಾಗುತ್ತವೆ. ಈ ಭವ್ಯ ಭವನವು ಮುಂದಿನ ಹಲವು ವರ್ಷಗಳ ಕಾಲ ಸಾರ್ವಜನಿಕರಿಗೆ ಉಪಯುಕ್ತವಾಗುವಂತೆ ಉತ್ತಮ ಗುಣಮಟ್ಟದಲ್ಲಿ ನಿರ್ಮಾಣವಾಗಬೇಕು ಎಂದು ಹೇಳಿದರು.

# ಕೊಡುಗೆ ನೀಡಿದ ಸಾಧಕರನ್ನು ಇತಿಹಾಸ ಎಂದಿಗೂ ಮರೆಯುವುದಿಲ್ಲ

• **ಉದಯವಾಹಿನಿ ಬೀದರ್:**

ಗುರುನಾನಕ್ ದೇವ್ ಇಂಜಿನಿಯರಿಂಗ್ ಕಾಲೇಜು, ಪ್ರಥಮ ವರ್ಷದ ಇಂಜಿನಿಯರಿಂಗ್ ವಿದ್ಯಾರ್ಥಿಗಳಿಗಾಗಿ "ವ್ಯಸನಮುಕ್ತ ಭಾರತ, ತಂತ್ರಜ್ಞಾನದಿಂದಾಗುವ ಅಪರಾಧಗಳು, ಸೈಬರ್ ಕ್ರೈಂ ಹಾಗೂ ಆಂಟಿ-ರಾಗಿಂಗ್ ಮತ್ತು ಕಿರುಕುಳ ವಿರೋಧಿ ಜಾಗೃತಿ" ಕಾರ್ಯಕ್ರಮವನ್ನು ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಲಾಯಿತು.

ಕಾರ್ಯಕ್ರಮವನ್ನು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ್‌ನ ಗೌರವ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಶ್ರೀ ರಾಘವೇಂದ್ರ ಉಪಾಧ್ಯಾಯ ಅವರು ಉದ್ಘಾಟಿಸಿದರು. ಅವರು ಮಾತನಾಡುತ್ತ ಪ್ರತಿಯೊಬ್ಬರೂ ದೇಶದ ಸಂವಿಧಾನ ರಚನೆಕಾರರಿಗೆ ಕೃತಜ್ಞರಾಗಿರಬೇಕು.

ದೇಶದ ಅಭಿವೃದ್ಧಿಗೆ ಕೊಡುಗೆ ನೀಡಿದ ಸಾಧಕರನ್ನು ಇತಿಹಾಸ ಎಂದಿಗೂ ಮರೆಯುವುದಿಲ್ಲ ಎಂದರು. ವಿದ್ಯಾರ್ಥಿಗಳು ಯಾವುದೇ ರೀತಿಯ ವ್ಯಸನ, ರಾಗಿಂಗ್, ಕಿರುಕುಳ ಅಥವಾ ಸೈಬರ್ ಅಪರಾಧಗಳಿಗೆ ಒಳಗಾಗದೆ ತಮ್ಮ ಅಮೂಲ್ಯ ಜೀವನವನ್ನು ಉತ್ತಮ ಗುರಿಗಳಿಗಾಗಿ ಬಳಸಿಕೊಳ್ಳಬೇಕು ಎಂದು ಕರೆ ನೀಡಿದರು.

"ನಾವೆಲ್ಲರೂ ಸೇರಿ ವ್ಯಸನಮುಕ್ತ ಹಾಗೂ ಅಪರಾಧಮುಕ್ತ ಭಾರತ ನಿರ್ಮಾಣಕ್ಕೆ ಕೈಜೋಡಿಸೋಣ" ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಕಾರ್ಯಕ್ರಮಕ್ಕೆ ಅಗತ್ಯ ಸಹಕಾರ ನೀಡಿದ ಸಂಸ್ಥೆಯ ಅಧ್ಯಕ್ಷರಾದ ಡಾ. ಎಸ್. ಬಲಬೀರ್ ಸಿಂಗ್ ಹಾಗೂ ಶ್ರೀ ರಾಘವೇಂದ್ರ ಉಪಾಧ್ಯಾಯ ಅವರು ಪ್ರಶಂಸಿಸಿದರು.

# ಎಸ್ ಐ ಆರ್ ವಿರುದ್ಧ ಎಫ್ ಐ ಆರ್ ಸೆ.1 ರಂದು ಬೆಂಗಳೂರು ಚಲೋ

• **ಉದಯವಾಹಿನಿ ಬಳ್ಳಾರಿ, :**

ರಾಜ್ಯದ 60 ಲಕ್ಷ ಅರ್ಹ ಮತದಾರರ ಮತದಾನದ ಹಕ್ಕನ್ನು, ಅವರ ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳಿಲ್ಲದೆ ರದ್ದುಗೊಳಿಸಿರುವುದು ಮತ್ತು 43.8 ಲಕ್ಷ ಮತದಾರರಿಗೆ ನಿಮ್ಮ ನಾಗರಿಕತ್ವದ ಬಗ್ಗೆ ನಮಗೆ ಅನುಮಾನವಿದೆ ಎಂದು ನೋಟೀಸ್ ಕಳಿಸಿ ಮಾನಸಿಕ ಹಿಂಸೆಗೆ ಗುರಿಪಡಿಸಿರುವುದು ಹೊಸದಾಗಿ ಸೇರ್ಪಡೆಯಾಗಬೇಕಿರುವ ಕನಿಷ್ಟ 15 ಲಕ್ಷ ಮತದಾರರ ನೊಂದಾವಣಿಯನ್ನು ಸಮಸ್ಯಾತ್ಮಕಗೊಳಿಸಿರುವ ಚುನಾವಣಾ ಆಯೋಗದ ವಿರುದ್ಧ ಸೆ.1 ರಂದು ಬೆಂಗಳೂರು ಚಲೋ ನಡೆಸಲಿದೆಂದು ಕರ್ನಾಟಕ ನಾಗರೀಕ ಸಂಘಟನೆಗಳ ಪರವಾಗಿ ಎದ್ದೇಳು ಕರ್ನಾಟಕದ ಮುಖಂಡ ಹೆಚ್. ಸಿದ್ದಣ್ಣ ಹೇಳಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಅವರು ಸ್ಥಳಾಂತರಗೊಂಡ ಎಂದು 43.8 ಲಕ್ಷ ಜನ ಮತದಾರರನ್ನು ತೆಗೆಯುವ ಹುನ್ನಾರ ನಡೆದಿದೆ.


ಉದಯವಾಹಿನಿ ಚಿತ್ರ

ಅದಕ್ಕಾಗಿ ಈ ಪ್ರಕ್ರಿಯೆಯನ್ನು ನಾವು ಒಪ್ಪುವುದಿಲ್ಲ. ಹೀಗಾಗಿ ಸೆ.1 ರಂದು ಚುನಾವಣಾ ಆಯೋಗದ ವಿರುದ್ಧ ಬೆಂಗಳೂರು ಚಲೋ ನಡೆಸಲಿದೆ. ಅಲ್ಲಿನ ಫ್ರೀಡಂ ಪಾರ್ಕ್ ನಿಂದ ಪ್ರತಿಭಟನಾ ಮೆರವಣಿಗೆ ಮೂಲಕ ತೆರಳಿ ಚುನಾವಣಾ ಆಯೋಗದ ಕಚೇರಿಗೆ ಮುತ್ತಿಗೆ ಹಾಕಲಿದೆ.

ಆಕ್ಷೇಪಣೆಗೆ ಒಂದು ತಿಂಗಳ ಕಾಲಾವಕಾಶ ಸಾಲದು ಆರು ತಿಂಗಳು ನೀಡಬೇಕು. ಬೇರೆ ಕಡೆ ಸ್ಥಳಾಂತರಗೊಂಡ ಮತದಾರರನ್ನು ಗುರುತಿಸಿ ಎನ್ಯುಮರೇಷನ್ ಫಾರಂ ನೀಡುವ ಕೆಲಸ ಆಗಬೇಕು ಕರ್ನಾಟಕದ 2025 ರ ಮತದಾರರ ಪಟ್ಟಿಯಲ್ಲಿದ್ದ 5.54ಕೋಟಿ ಮತಗಳ ಪೈಕಿ 1.08 ಕೋಟಿ ಮತಗಳನ್ನು ಶಾಶ್ವತವಾಗಿ ತೆಗೆಯಲು ಮುಂದಾಗಿರುವುದು ಸರಿಯಲ್ಲ, ಇಂತಹ ದೋಷ ಮತ್ತು ದುಷ್ಕೃತನದ ಪ್ರಕ್ರಿಯೆಯನ್ನು ರೂಪಿಸಿರುವ ಕೇಂದ್ರ ಚುನಾವಣಾ ಹಾಗೂ ಆಯೋಗದ ಜ್ಞಾನೇಷ್ ಕುಮಾರ್ ರಾಜಿನಾಮೆಯನ್ನು ಕೊಡಬೇಕೆಂದು ಒತ್ತಾಯಿಸಿದರು.

# ಜೀವನದಲ್ಲಿ ಸುಖ ದು:ಖ ಸಮನಾಗಿ ಸ್ವೀಕರಿಸಿ

• **ಉದಯವಾಹಿನಿ ಭಾಲ್ಕಿ:**

ಮನುಷ್ಯನ ಜೀವನದಲ್ಲಿ ಸುಖ ಮತ್ತು ದುಖಗಳನನು ಸಮಾನವಾಗಿ ಸ್ವೀಕರಿಸುವುದರಿಂದ ಮನಸ್ಸಿನ ನೆಮ್ಮದಿ ಹಾಗೂ ಮಾನಸಿಕ ಸ್ಥೈರ್ಯ ಹೆಚ್ಚಾಗುತ್ತದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು. ತಾಲ್ಲೂಕಿನ ಕದಲಾಬಾದ ಗ್ರಾಮದಲ್ಲಿ ಬುಧವಾರ ಆಯೋಜಿಸಿದ್ದ ನಮ್ಮೂರಿನಲ್ಲಿ ಶ್ರಾವಣ ಸಂಭ್ರಮ ಪ್ರವಚನದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಸುಖ ಬಂದಾಗ ಹಿಗ್ಗದೆ, ದುಖ ಬಂದಾಗ ಕುಗ್ಗದೆ ಎರಡನ್ನೂ ಸಮಾನವಾಗ ಸ್ವೀಕರಿಸುವುದೇ ನಿಜವಾದ ಬುದ್ಧಿವಂತಿಕೆ. ಜೀವನದಲ್ಲಿ ಯಾವುದು ಶಾಶ್ವತವಲ್ಲ ಸುಖದಂತೆ ದುಖವೂ ಕೂಡ ತಾತ್ಕಾಲಿಕವಾಗಿರುತ್ತದೆ ಎಂದರು. ಅಧ್ಯಾತ್ಮ, ಸತ್ಸಂಗ ಪಾಲ್ಗೊಳ್ಳುವುದರಿಂದ ಮತ್ತು ಶರಣರ, ಮಹಾತ್ಮರ ವಾಣಿ ಆಲಿಸುವುದರಿಂದ ಜೀವನದಲ್ಲಿ ಬರುವ ಕಷ್ಟಗಳನ್ನು ಧೈರ್ಯದಿಂದ ಎದುರಿಸುವ ಶಕ್ತಿಯನ್ನು ಬರುತ್ತದೆ.

ಪಲ್ಸ್ ಪೊಲಿಯೋ ದಂತಹ ಒಂದು ಹನಿ ಮನುಷ್ಯನ ಅಂಗವಿಕಲತೆ ದೂರ ಮಾಡುತ್ತದೆ. ಹಾಗೇ ಮಾನಸಿಕ ಕಾಯಿಲೆ ನಿವಾರಿಸಲು ಅಧ್ಯಾತ್ಮ, ಸತ್ಸಂಗ, ಶರಣರ, ಮಹಾತ್ಮರ ನುಡಿಗಳು ಪೂರಕವಾಗಿವೆ.

# ಬರ ಘೋಷಣೆ ಮಾಡಿ, ಇಲ್ಲವೇ ರೈತರಿಗೆ ವಿಷ ಕೊಡಿ

## 101 ತಾಲ್ಲೂಕು ಬರಪೀಡಿತ ಎಂದು ಸರ್ಕಾರದಿಂದ ಅಧಿಕೃತ ಘೋಷಣೆ ಫಲಶ್ರುತಿ: ನಮ್ಮ ಪತ್ರಿಕಾ ವರದಿಯ ಬೆನ್ನಲ್ಲೇ ಎಚ್ಚೆತ್ತ ಸರ್ಕಾರ

• **ವರದಿಗಾರರು ಮಂಜು ವುಂತಗಲ್**

• **ಉದಯವಾಹಿನಿ ಕಾರಟಗಿ :**

ಕೊಪ್ಪಳ ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ಬರದ ಛಾಯೆ ಆವರಿಸಿದ್ದು, ಸರ್ಕಾರ ಕೂಡಲೇ ಬರ ಘೋಷಿಸಿ ರೈತರಿಗೆ ಪರಿಹಾರ ನೀಡಬೇಕು, ಇಲ್ಲದಿದ್ದರೆ ರೈತರಿಗೆ ವಿಷ ಕೊಡಲಿ ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ರುದ್ರಪ್ಪ ಕೋಳೂರ ಅವರು ಮಾಡಿದ್ದ ಆಗ್ರಹಕ್ಕೆ ಕೊನೆಗೂ ಜಯ ಸಿಕ್ಕಿದೆ.


**1: ಕೂಡಲೇ ಬರ ಘೋಷಿಸಿ ರೈತರಿಗೆ ಬರ ಪರಿಹಾರ ನೀಡಬೇಕು.**
**2 : 2 ಲಕ್ಷ ರೂ.ವರೆಗೆ ರೈತರ ಸಾಲ ಮನ್ನಾ ಮಾಡಬೇಕು.**
**3: ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆಯಡಿ ಬೆಳೆ ವಿಮೆ ತುಂಬಿದ ರೈತರ ಖಾತೆಗೆ ತಕ್ಷಣ ಹಣ ಜಮೆ ಮಾಡಬೇಕು.**
**4 : ಹಣವಿಲ್ಲದೆ ಬರದ ಮಧ್ಯದಲ್ಲಿ ಬೆಳೆ ವಿಮೆ ತುಂಬದೇ ಇರುವ ರೈತರಿಗೂ ಹೆಚ್ಚಿನ ಪರಿಹಾರ ನೀಡಬೇಕು.**

ಉದಯವಾಹಿನಿ ಪತ್ರಿಕೆಯಲ್ಲಿ ಈ ಕುರಿತು ವರದಿ ಪ್ರಕಟವಾದ ಬೆನ್ನಲ್ಲೇ ಎಚ್ಚೆತ್ತ ರಾಜ್ಯ ಸರ್ಕಾರ, ಮುಂಗಾರು ಮಳೆ ಕೈಕೊಟ್ಟ ಹಿನ್ನೆಲೆಯಲ್ಲಿ ಮೊದಲ ಹಂತದಲ್ಲಿ ರಾಜ್ಯದ 101 ತಾಲ್ಲೂಕುಗಳನ್ನು ಅಧಿಕೃತವಾಗಿ 'ಬರಪೀಡಿತ' ಎಂದು ಘೋಷಿಸಿ GO No. RD 586 TNR 2026, Dated:27.08.2026 ರಂತೆ ಆದೇಶ ಹೊರಡಿಸಿದೆ.

**ರೈತ ಮುಖಂಡ ಅಂದಪ್ಪ ಕೋಳೂರ ಆಗ್ರಹಕ್ಕೆ ಸಿಕ್ತು ಜಯ**


ಉದಯವಾಹಿನಿ ಚಿತ್ರ



> ನಮ್ಮ ವರದಿಯ ಬೆನ್ನಲ್ಲೇ ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಉಪಮುಖ್ಯಮಂತ್ರಿ **ಡಾ. ಜಿ. ಪರಮೇಶ್ವರ್** ಅವರು 101 ತಾಲ್ಲೂಕು ಬರ ಘೋಷಣೆಯನ್ನು ಅಧಿಕೃತವಾಗಿ ತಿಳಿಸಿದ್ದಾರೆ.

ಮುಖ್ಯಮಂತ್ರಿಗಳ ಆದೇಶದಂತೆ ಜಿಲ್ಲಾ ಉಸ್ತುವಾರಿ ಸಚಿವರು ರೈತರ ಜಮೀನಿಗೆ ಭೇಟಿ ನೀಡಿ ಬೆಳೆ ಸಮೀಕ್ಷೆ ನಡೆಸಿದ್ದರೂ, ಅಧಿವೇಶನದಲ್ಲಿ ಬರದ ಬಗ್ಗೆ ಚರ್ಚೆಯೇ ನಡೆಯುತ್ತಿಲ್ಲ. ಒಬ್ಬ ಸಚಿವರ ರಾಜೀನಾಮೆ ಬಗ್ಗೆಯೇ ಚರ್ಚೆ ನಡೆಯುತ್ತಿದೆಯೇ ಹೊರತು ರೈತರ ಸಂಕಷ್ಟದ ಬಗ್ಗೆ ಚರ್ಚೆಯಾಗುತ್ತಿಲ್ಲ ಎಂದು ಅವರು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದರು.

> **ಉದಯವಾಹಿನಿ ಫಲಶ್ರುತಿ**
> ರೈತ ಮುಖಂಡ ಅಂದಪ್ಪ ಕೋಳೂರ ಅವರ ಹೋರಾಟ ಹಾಗೂ ನಮ್ಮ ಪತ್ರಿಕೆಯಲ್ಲಿ ಪ್ರಕಟವಾದ ವರದಿಯ ಫಲವಾಗಿ ಸರ್ಕಾರ ಬರ ಘೋಷಣೆ ಮಾಡಿರುವುದಕ್ಕೆ ರೈತ ವಲಯದಲ್ಲಿ ಸಮಾಧಾನ ವ್ಯಕ್ತವಾಗಿದೆ.
> ಘೋಷಣೆಯೊಂದಿಗೆ ನಿಲ್ಲದೆ, ಕೂಡಲೇ ರೈತರ ಖಾತೆಗೆ ಪರಿಹಾರ ಹಾಗೂ ಬೆಳೆ ವಿಮೆ ಜಮೆ ಮಾಡಬೇಕು ಮತ್ತು ಇನ್ನುಳಿದ ಜಿಲ್ಲೆಗಳಲ್ಲಿ ಸಮೀಕ್ಷೆ ನಡೆಸಿ ಇನ್ನುಳಿದ ತಾಲ್ಲೂಕಗಳನ್ನು ಬರಪೀಡಿತ ತಾಲ್ಲೂಕಾಗಳನ್ನಾಗಿ ಘೋಷಿಸಬೇಕು ಎಂದು ರೈತರು ಆಗ್ರಹಿಸಿದ್ದಾರೆ.



ಕೊಪ್ಪಳ ಜಿಲ್ಲೆ ಸೇರಿದಂತೆ ಉತ್ತರ ಕರ್ನಾಟಕದಲ್ಲಿ ಮುಂಗಾರು ಕೊರತೆಯಿಂದ 6.64 ಲಕ್ಷ ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ

### 350 ಕೋಟಿ ಅನುದಾನ

> ಇದರಲ್ಲಿ 89 ತಾಲ್ಲೂಕುಗಳಲ್ಲಿ ತೀವ್ರ ಬರ ಹಾಗೂ 12 ತಾಲ್ಲೂಕುಗಳಲ್ಲಿ ಸಾಧಾರಣ ಬರ ಎಂದು ಗುರುತಿಸಲಾಗಿದೆ. ಈ ಆದೇಶ 6 ತಿಂಗಳವರೆಗೆ ಜಾರಿಯಲ್ಲಿರಲಿದೆ.
> **– 350 ಕೋಟಿ ಅನುದಾನ:** ಬರ ನಿರ್ವಹಣೆ ಮತ್ತು ತುರ್ತು ಕೆಲಸಗಳಿಗಾಗಿ ಆರಂಭಿಕವಾಗಿ 350 ಕೋಟಿ ರೂ. ಮೀಸಲಿಡಲಾಗಿದೆ.

> ಮಳೆ ಕೊರತೆಯಿಂದ ಜಲಾಶಯಗಳಲ್ಲಿ ನೀರಿನ ಮಟ್ಟ ಕುಸಿದಿದ್ದು (ಕಳೆದ ವರ್ಷ 815 ಟಿಎಂಸಿ ಇದ್ದದ್ದು ಈ ವರ್ಷ 684 ಟಿಎಂಸಿಗೆ ಕುಸಿದಿದೆ), ಮುಂಬರುವ ದಿನಗಳಲ್ಲಿ 2069 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಲಿದೆ. ಈಗಾಗಲೇ 758 ಗ್ರಾಮಗಳಿಗೆ 149 ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿದೆ.

ಬಿತ್ತನೆ ಮಾಡಿದ ಹೆಸರು, ತೊಗರಿ, ಶೇಂಗಾ, ಮೆಕ್ಕೆಜೋಳ, ಈರುಳ್ಳಿ, ಅಲಸಂದಿ, ಉದ್ದು, ಹತ್ತಿ ಬೆಳೆಗಳು ಒಣಗಿ ನಾಶವಾಗಿವೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದರು.

ಈ ಸಂದರ್ಭದಲ್ಲಿ ರೈತ ಸಂಘದ ಪದಾಧಿಕಾರಿಗಳಾದ ಅಣ್ಣಪ್ಪ ನೆರೆಗಲ್, ಕಳಕಪ್ಪ ಕ್ಯಾದಿಗುಂಪಿ, ಸವಿತಾ ಉಮೇಶ, ನಾಗರಡ್ಡಿ, ಬಸವರಾಜ ಹನಸಿ, ಮಾರುತಿ ಮರಡಿ, ಯಲ್ಲಪ್ಪ ಎಚ್. ಬಾಬರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.